

# ಸಿಹಿ ಕಹಿ

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ
Editor: MARUTIBASAVANTAPPAHOSAMANI
Cell : +91 9741319119

ಕನ್ನಡ ದಿನಪತ್ರಿಕೆ, ಬಾಗಲಕೋಟೆ
ಬಾಗಲಕೋಟೆಯಿಂದ ಪ್ರಕಟಿತ
RNI REG No. : KARKAN/2016/75068

SIHI KAHI
KANNADA DAILY MORNING
BAGALKOT

Volume : 06 | Issue : 277 | Saturday 13-07-2024 | E-mail : maruti.b.hosamani76@gmail.com | Page: 4 | Price : Rs. 1/-


## ನಲಿ-ಕಲಿ ಶಿಕ್ಷಣ ಮಕ್ಕಳಿಗೆ ಭದ್ರ ಬುನಾದಿ: ಶ್ರೀಧರ ನಡುಗಡ್ಡಿ



**ಹಿರೇರೂಗಿ :** ನಲಿ ಕಲಿ ಶಿಕ್ಷಣವನ್ನು ಪುನಶ್ಚೇತನ ಗೊಳಿಸಿ ಮಕ್ಕಳಲ್ಲಿ ಪ್ರತಿನಿತ್ಯ ಉತ್ಸಾಹ ತುಂಬುವ ಕಾರ್ಯ ಶಿಕ್ಷಕ-ರಿಂದ ನಡೆಯಬೇಕು ಎಂದು ಕ್ಷೇತ್ರ ಸಮನ್ವಯಧಿಕಾರಿ ಶ್ರೀಧರ ನಡುಗಡ್ಡಿ ಹೇಳಿದರು.

ಅವರು ತಾಲೂಕಿನ ಹಿರೇರೂಗಿ ಗ್ರಾಮದ ಕೆಬಿಎಸ್ ಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಕ್ಷೇತ್ರ ಸಮನ್ವಯಧಿಕಾರಿಗಳ ಕಾರ್ಯಾಲಯ ಇಂಡಿ ವತಿಯಿಂದ ಆಯೋಜಿಸಿದ್ದ ಹಿರೇರೂಗಿ-ತಡವಲಗಾ ಕ್ಲಸ್ಟರ್ ಮಟ್ಟದ ನಲಿ-ಕಲಿ ಶಿಕ್ಷಕರ ಸಮಾಲೋಚನೆ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ನಲಿ-ಕಲಿ ಶಿಕ್ಷಣ ಮಕ್ಕಳ ಭವಿಷ್ಯದ ಭದ್ರ ಬುನಾದಿ.

2008ರಿಂದರಾಜ್ಯಾದ್ಯಂತ ಜಾರಿಗೊಂಡ ಈ ಪದ್ದತಿಯಲ್ಲಿ ಮಕ್ಕಳು ನಲಿಯುತ್ತ ಕಲಿಯಲಿ ಎಂಬ ತತ್ವ ಅಡಗಿದ್ದು, ಚಟುವಟಿಕೆಗಳ ಮೂಲಕ ಮಕ್ಕಳು ಆಡುತ್ತಾ ಹಾಡುತ್ತಾ ಕಲಿಯಲು ಶಿಕ್ಷಕರ ಸಹಕಾರ ಅಗತ್ಯ ಎಂದು ಹೇಳಿದರು.

ತಾಲೂಕ ನಲಿಕ ಲಿ ನೋಡಲ್ ಅಧಿಕಾರಿ ಬಸವರಾಜ ಗೋರನಾಳ ಮಾತನಾಡಿ, ವಿದ್ಯಾರ್ಥಿಯುಶಿಕ್ಷಕರಮಾರ್ಗದರ್ಶನದಲ್ಲಿ ಕಲಿಕೆಯನ್ನು ಆರಂಭಿಸಿ, ಗೆಳೆಯರ ಸಹಕಾರದಲ್ಲಿ ಪುನರ್ಬಲನ ಗೊಂಡು, ಸ್ವತಂತ್ರವಾಗಿ ಕಾರ್ಯ ನಿರ್ವಹಿಸುವ ಸಾಮರ್ಥ್ಯ ಗಳಿಸುವುದು ಈ ಪದ್ಧತಿಯ ವೈಶಿಷ್ಟ್ಯವಾಗಿದೆ ಎಂದು ಹೇಳಿದರು.

ಹಿರೇರೂಗಿ ಕ್ಲಸ್ಟರ್ ಸಿಆರ್ ಪಿ ಸಂತೋಷ ಚವ್ಹಾಣ ಮಾತನಾಡಿ, ನಲಿ-ಕಲಿ ಪದ್ಧತಿಯಲ್ಲಿರುವ ಬಹು ಹಂತದ ಕಲಿಕೆ, ಸ್ವಕಲಿಕೆ, ಸ್ವವೇಗದ ಕಲಿಕೆ, ಸಂತಸದ ಕಲಿಕೆ ಯಂತಹ ವಿಶೇಷತೆಗಳನ್ನು ವರ್ಗ ಕೋಣೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸುವಲ್ಲಿ ಶಿಕ್ಷಕರ ಪಾತ್ರ ಅತಿಮುಖ್ಯ ಎಂದು ಹೇಳಿದರು.

ಯುಬಿಎಸ್ ಶಿಕ್ಷಕ ಸಂತೋಷ ಬಂಡೆ ಮಾತನಾಡಿ, ಈ ಪದ್ಧತಿ ಶಿಶು ಕೇಂದ್ರಿತ-ಚಟುವಟಿಕೆ ಆಧಾರಿತವಾಗಿ ಮಗುವಿಗೆ ಶಾಲಾ ಶಿಕ್ಷಣದೊಂದಿಗೆ ಜೀವನಕ್ಕೆ ಬೇಕಾದ ಮೌಲ್ಯಗಳನ್ನು ಬೆಳೆಸಲು ಸಹಕಾರಿಯಾಗಿದ್ದು, ಮಗುವಿಗೆ ಸ್ವಕಲಿಕಾ ಪ್ರಕ್ರಿಯೆಯಲ್ಲಿ ತೊಡಗಲು ಸಹಕಾರಿಯಾಗಿದೆ ಎಂದು ಹೇಳಿದರು.

ಮುಖ್ಯ ಶಿಕ್ಷಕ ಅನಿಲ ಪತಂಗಿ ಅಧ್ಯಕ್ಷತೆ ವಹಿಸಿದ್ದರು.

ತಡವಲಗಾ ಸಿಆರ್ ಪಿ ಪ್ರಕಾಶ ರಾಠೋಡ, ಸಂಪನ್ಮೂಲ ಶಿಕ್ಷಕರಾಗಿ ಅಶೋಕ ಚವ್ಹಾಣ, ಆರ್ ಆರ್ ಬೇನೂರ ಹಾಗೂ ಹಿರೇರೂಗಿ-ತಡವಲಗಾ ಕ್ಲಸ್ಟರ್ ವ್ಯಾಪ್ತಿಯ ನಲಿ-ಕಲಿ ಶಿಕ್ಷಕರು ಭಾಗವಹಿಸಿದ್ದರು. ಶಿಕ್ಷಕ ಎಸ್ ಆರ್ ಚಾಳೇಕರ ಕಾರ್ಯಕ್ರಮ ನಿರ್ವಹಿಸಿದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನೆಲ್:ಶಿವಪ್ಪ.ಬಿ.ಹರಿಜನ.ಇಂಡಿ ವಿಜಯಪುರ.**

## ದೇವರ ಹಿಪ್ಪರಗಿ ಪೋಲಿಸ್ ಠಾಣೆಯಲ್ಲಿ ಮೊಹರಂ ಪ್ರಯುಕ್ತ ಜರುಗಿದ ಶಾಂತಿ ಸಭೆ



**ದೇವರ ಹಿಪ್ಪರಗಿ :** ಮೊಹರಂ ಹಬ್ಬದಲ್ಲಿ ಯಾವುದೇ ಕಾನೂನು ಬಾಹಿರ, ಅಹಿತಕರ ಘಟನೆ ನಡೆಯದಂತೆ ಶಾಂತಿಯುತ ಹಬ್ಬ ಆಚರಿಸುವಂತೆ ಪಿಎಸ್ಐ ಬಸವರಾಜ ತಿಪ್ಪರಡ್ಡಿ ಸಲಹೆ ನೀಡಿದರು.

ಪಟ್ಟಣದ ಪೋಲೀಸ್ ಠಾಣೆಯಲ್ಲಿ ಮೊಹರಂ ನಿಮಿತ್ತ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು. ಮೊಹರಂ ಸಮಾಜದಲ್ಲಿ ವಿಶಿಷ್ಟ ಹಬ್ಬ . ಹಿಂದೂ-ಮುಸ್ಲಿಂ ಎಂಬ ಭೇದ ಭಾವಗಳಿಲ್ಲದೆ ಎಲ್ಲರೂ ಒಗ್ಗಟ್ಟಾಗಿ ಆಚರಿಸುವ ಸಂಭ್ರಮದ ಹಬ್ಬವಾಗಿದೆ. ಹೀಗಾಗಿ ಈ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ ಮೆರುಗು ಬರುವಂತೆ ಮಾಡಬೇಕು ವಿನಃ ಸಮಾಜಕ್ಕೆ ಕೆಡಕು ಉಂಟು ಮಾಡುವಂತಹ ಘಟನೆಗಳನ್ನು ಮಾಡಬಾರದು ಎಂದು ಹೇಳಿದರು.

ಸಂದರ್ಭದಲ್ಲಿ ಮುಸ್ಲಿಂ ಕಮಿಟಿಯ ಅಧ್ಯಕ್ಷರಾದ ಮೈಹಿಬೂಬ ಹುಂಡೇಕಾರ, ವಿನೋದಗೌಡ ಪಾಟೀಲ, ಪ್ರಕಾಶ ಗುಡಿಮನಿ, ಶ್ರೀಧರ ನಾಡಗೌಡ ಮಾತನಾಡಿ, ಪಟ್ಟಣ ಶಾಂತಿಗೆ ಹೆಸರಾಗಿದೆ, ಮೊಹರಂ ಹಬ್ಬ ಭಾವೈಕ್ಯತೆಯ ಸಂಕೇತ. ಹಿಂದೂ-ಮುಸ್ಲಿಂ ಸೇರಿ ಎಲ್ಲಾ ಜನಾಂಗದವರು ಒಟ್ಟುಗೂಡಿ ಆಚರಿಸಿ ಕೊಂಡ ಬಂದ ಹಿನ್ನೆಲೆ ಇದೆ ನಾವೆಲ್ಲರೂ ಇಲಾಖೆಗೆ ಸಹಕಾರ ನೀಡಿ ಹಬ್ಬ ಆಚರಿಸುತ್ತೇವೆ ಎಂದರು.

ಇದೇ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಸದಸ್ಯರುಗಳಾದ ಬಸೀರ ಅಹ್ಮದ್ ಬೇಪಾರಿ, ಕಾಸಪ್ಪ ಭಜಂತ್ರಿ ಮುಖಂಡರುಗಳಾದ ಮಲ್ಲನಗೌಡ ಪಾಟೀಲ, ಹುಸೇನ್ ಗೌಂಡಿ, ಸುನೀಲ ಕನಮಡಿ ಸೇರಿದಂತೆ ಪಟ್ಟಣದ ಪ್ರಮುಖರು, ಗಣ್ಯರು ಹಾಗೂ ಇಲಾಖೆ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು. ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನೆಲ್:ಭೀಮಪ್ಪ ಹಚ್ಯಾಳ. ದೇವರ ಹಿಪ್ಪರಗಿ.**

## ಮೊಳಕಾಲ್ಮೂರು ತಾಲೂಕಿನ ರಾಂಪುರ ಗ್ರಾಮದಲ್ಲಿ ಹೊಸದಾಗಿ ನಾಡಕಚೇರಿ ಬಿಲ್ಡಿಂಗ್ ಉದ್ಘಾಟನೆ ಮಾಡಿದ ಶಾಸಕರು



**ರಾಂಪುರ :** ಇಂದು ಮೊಳಕಾಲ್ಮುರು ತಾಲೂಕಾ ರಾಂಪುರ ಗ್ರಾಮದಲ್ಲಿ ಜನಪ್ರಿಯ ಶಾಸಕರಾದ ಶ್ರೀ ಎನ್ ವೈ ಗೋಪಾಲಕೃಷ್ಣ ಶಾಸಕರು ನಿರ್ಮಾಣ ಗೊಂಡಿರುವ 18 ಲಕ್ಷದ 50,000 ಅನುದಾನ ಬಿಡುಗಡೆ ಮಾಡಿಸಿ ಕೇವಲ ಐದು ತಿಂಗಳಲ್ಲೇ ನಾಡಕಚೇರಿ ಉಪ-ತಹಶಿಲ್ದಾರ ನೂತನ ಕಟ್ಟಡ ಉದ್ಘಾಟನೆ ನೆರವೇರಿಸಿದರು.

ತಹಶಿಲ್ದಾರ್ ಟಿ ಜಗದೀಶ್, ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀಮತಿ ನಾಗವೇಣಿ, ಉಪಾಧ್ಯಕ್ಷರು ಖಾದರ್ ಸದಸ್ಯರು, ಪಿಡಬ್ಲ್ಯೂಡಿ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು, ಮುಖಂಡರುಗಳು, ಅಭಿಮಾನಿಗಳು, ಮೊದಲಾದವರು ಉಪಸ್ಥಿತರಿದ್ದರು ಎಂದು ವರದಿಯಾಗಿದೆ.

**ತಾಲೂಕ ವರದಿಗಾರರು. ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನೆಲ್: ತಿಪ್ಪೇಸ್ವಾಮಿ. ಹೊಂಬಾಳೆ. ಮೊಳಕಾಲ್ಮೂರು.**

## ಅಸಹಾಯಕರಿಗೆ ಆಸರೆಯಾಗುವುದೇ ದೇವರ ಕೆಲಸ ಸಾರ್ವಜನಿಕರ ಸೇವಾ ಅವಕಾಶ ದೇವರು ನಮಗೆ ಕೊಟ್ಟ ವರ



**ರಬಕವಿ-ಬನಹಟ್ಟಿ :** ಸರ್ಕಾರಿ ನೌಕರರು ಸಾರ್ವಜನಿಕರ ಸೇವೆಗೆ ದೇವರು ಕಲ್ಪಿಸಿದ ಅವಕಾಶಎಂದುಭಾವಿಸಿಸಮಾಜದುಬಡವರ, ದುರ್ಬಲರ ಸಂಕಷ್ಟ ದೂರಗೊಳಿಸಲು ಶ್ರಮಿಸಬೇಕು. ಅಸಹಾಯಕರ ಬೆನ್ನೆಲುಬಾಗಿ ನಿಂತು ಸರ್ಕಾರಿ ಸೌಲಭ್ಯಗಳ ಕಲ್ಪಿಸಲು ಮುಂದಾದರೆ ಅದೇ ದೇವರ ಕೆಲಸ ಎಂದು ಶಾಸಕ ಸಿದ್ದು ಸವದಿ ಸರ್ಕಾರಿ ನೌಕರರಿಗೆ ಕಿವಿಮಾತು ಹೇಳಿದರು.

ಶುಕ್ರವಾರಸಂಜೆರಾಮಪುರದಪೂರ್ಣಪ್ರಜ್ಞ ಶಿಕ್ಷಣ ಸಂಸ್ಥೆಯ ಸಭಾಭವನದಲ್ಲಿ ಜರುಗಿದ ರಬಕವಿ-ಬನಹಟ್ಟಿ ತಾಲೂಕು ಸರ್ಕಾರಿ ನೌಕರರ ಸರ್ವಸದಸ್ಯರ ಸಾಮಾನ್ಯ ಸಭೆಯನ್ನು ಸಸಿಗೆ ನೀರುಣಿಸಿ ಚಾಲನೆ ನೀಡಿ ಮಾತನಾಡಿದ ಅವರು, ಸತ್ಯ ಮತ್ತು ದೇಶ ಶಾಶ್ವತ. ದೇಶ ಕಟ್ಟುವ ಕಾಯಕದಲ್ಲಿ ಸಶಕ್ತ ನಾಗರಿಕರ ನಿರ್ಮಾಣ ನಮ್ಮೆಲ್ಲರ ಕೆಲಸವಾಗಬೇಕು.

ಸಂಘಟನೆ ನೌಕರರ ಆತ್ಮಸ್ಥೈರ್ಯ ಹೆಚ್ಚಿಸುವುದು. ನೌಕರರಿಗೆ ನ್ಯಾಯ ಒದಗಿಸಲು ಸಂಘದ ಧುರೀಣರಲ್ಲಿ ತುಡಿತವಿರಬೇಕು. ರಾಜ್ಯಾಧ್ಯಕ್ಷ ಷಡಕ್ಷರಿ ಕ್ರಿಯಾಶೀಲರಿದ್ದು, ಸರ್ಕಾರದ ಜೊತೆಗೂ ಉತ್ತಮ ಬಾಂಧವ್ಯ ಹೊಂದಿದ್ದಾರೆ. ಬಿಜೆಪಿ ಸರ್ಕಾರವಿದ್ದಾಗ ಏಳನೇ ವೇತನ ಆಯೋಗ ಜಾರಿಗೊಳಿಸಲು ನಿರ್ಧರಿಸಿದಾಗ ನೀತಿ ಸಂಹಿತೆ ಅಡ್ಡಿಯಾಗಿತ್ತು. ಬಳಿಕ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ ತನ್ನ ಪ್ರಣಾಳಿಕೆಯಲ್ಲೇ ಹಳೇ ಪಿಂಚಣಿ ಯೋಜನೆ ಜಾರಿಗೊಳಿಸುವ, ಏಳನೇ ವೇತನ ಆಯೋಗದ ಶಿಫಾರಸು ಜಾರಿಗೊಳಿಸುವ ಭರವಸೆ ನೀಡಿ ಇದುವರೆಗೂ ಜಾರಿಗೊಳಿಸಿಲ್ಲವಾದ್ದರಿಂದ ಜಿಲ್ಲಾ ಮಟ್ಟದ ಸಂಘಟನೆಗಳ ನಾಯಕರು ರಾಜ್ಯ ಸಮೀತಿಗೆ ಒತ್ತಡ ಹೇರಿ ಸರ್ಕಾರ ಎರಡೂ ಭರವಸೆಗಳ ಈಡೇರಿಕೆಗೆ ಗಡುವು ನೀಡಬೇಕು. ವಿಪಕ್ಷವಾಗಿ ನಾವು ಸರ್ಕಾರದ ನಡೆಯ ವಿರುದ್ಧ ಹೋರಾಟ ನಡೆಸುತ್ತೇವೆ. ಬೆಲೆ ಏರಿಕೆ ಬಿಸಿಯ ನಡುವೆ ಬದುಕು ಕಟ್ಟಿಕೊಳ್ಳಲು ಹರ ಸಾಹಸ ನಡೆಯುತ್ತಿರುವಾಗ ಸಿದ್ಧರಾಮಯ್ಯ ಸರ್ಕಾರ ಲೋಕಸಭಾ ಚುನಾವಣೆ ಬಳಿಕ ಎರಡು ಸಂಪುಟ ಸಭೆ ನಡೆಸಿದರೂ ನಿಮ್ಮ ಬೇಡಿಕೆಗೆ ಅಸ್ತು ಎಂದಿಲ್ಲ. ಸದನದಲ್ಲಿ ನೌಕರರ ಧ್ವನಿಯಾಗಲು ಅವಕಾಶ ಕೋರಿ ಸರ್ಕಾರದ ಗಮನ ಸೆಳೆಯುವ ಭರವಸೆ ನೀಡಿದರು.

ಆರೋಗ್ಯ ಸಂಜೀವಿನಿ, ಓಪಿಎಸ್ ಮತ್ತು ಏಳನೇ ವೇತನ ಆಯೋಗದ ಶಿಫಾರಸು ಜಾರಿಗಾಗಿ ಬರುವ ರಾಜ್ಯ ಕಾರ್ಯಕಾರಿಣಿ ಸಭೆಯಲ್ಲಿ ಜಿಲ್ಲಾಧ್ಯಕ್ಷರ ಜೊತೆಗೆ ತೆರಳಿ ಗಮನ ಸೆಳೆದು ನಮ್ಮ ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಮುಂದಾಗಲೂ ಸಭೆಯಲ್ಲಿ ಚರ್ಚಿಸಲಾಗುವುದೆಂದು ತಾಲೂಕು ನೌಕರರ ಸಂಘದ ಅಧ್ಯಕ್ಷ ಬಸವರಾಜ ಹನಗಂಡಿ ನುಡಿದರು. ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಬಳ್ಳಾರಿ ಮಾತನಾಡಿದರು.

ವೇದಿಕೆಯಲ್ಲಿ ತಹಶೀಲ್ದಾರ ಗಿರೀಶ ಸ್ವಾದಿ ಅಧ್ಯಕ್ಷತೆ ವಹಿಸಿದ್ದರು. ಪೌರಾಯುಕ್ತ ಜಗದೀಶ ಈಟಿ, ಪೂರ್ಣಪ್ರಜ್ಞ ಶಿಕ್ಷಣ ಸಂಸ್ಥೆ ಅಧ್ಯಕ್ಷ ಸಿದ್ದಪ್ಪ ವೆಂಕಪ್ಪ ಮೇಣಿ, ಬಿಆರ್‌ಪಿ ರಮೇಶ ಅವಟಿ, ಸಂಜು ಸಪರೆಡ್ಡಿ, ವಿಠಲ ವಾಲಿಕಾರ, ಬಿ. ಎಸ್. ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಎಂ. ಕೆ. ಮೇಗಾಡಿ ಸಂಗಡಿಗರು ಪ್ರಾರ್ಥಿಸಿದರು. ಮಲ್ಲಿಕಾರ್ಜುನ ಗಡೆಣ್ಣವರ ಸ್ವಾಗತ ಗೀತೆ ಹಾಡಿದರು. ಮಹೇಶ ಬಾಗಲಕೋಟ ಸ್ವಾಗತಿಸಿದರು. ಪ್ರಶಾಂತ ಹೊಸಮನಿ ಸೊಗಸಾಗಿ ನಿರೂಪಿಸಿದರು.

ಸಭೆಯಲ್ಲಿ ಡಿ. ಬಿ. ಜಾಯಗೊಂಡ, ವಿಜಯಕುಮಾರ ಹಲಕುರ್ಕಿ, ಪ್ರಕಾಶ ಮಂಡಿ, ಪ್ರಸಾದ ಮಾವರಕರ, ಬಿ. ಡಿ. ನೇಮೇಗೌಡ, ಅನೀಲ ಕಡ್ಲಿ, ಶಿವು ಯಾದವಾಡ, ಬಸವರಾಜ ಮುಧೋಳ ಸೇರಿದಂತೆ ಸರ್ಕಾರಿ ನೌಕರರು ಪಾಲ್ಗೊಂಡಿದ್ದರು.

## ಬೆಳ್ಳಂಬೆಳಿಗ್ಗೆ ಜೆಸಿಬಿ ಘರ್ಜನೆ: ಗೂಡಂಗಡಿಗಳ ತೆರವು



**ರಬಕವಿ-ಬನಹಟ್ಟಿ:**ನಗರದಹೃದಯಭಾಗವಾಗಿರುವ ಸಮುದಾಯ ಆರೋಗ್ಯ ಕೇಂದ್ರದ ಮುಂಭಾಗದ ಕುಡಚಿ-ಜಮಖಂಡಿ ರಾಜ್ಯ ಹೆದ್ದಾರಿಯ ಸರ್ಕಾರಿ ಜಾಗಅತಿಕ್ರಮಿಸಿದ್ದಗೂಡಂಗಡಿಗಳನ್ನುನಗರಸಭೆಯ ಸಿಬ್ಬಂದಿ ತೆರವುಗೊಳಿಸಿತು.

ಶನಿವಾರಬೆಳಿಗ್ಗೆಯೇಪೊಲೀಸರು,ನಗರಸಭೆಸಿಬ್ಬಂದಿ ಜೊತೆ ಜೆಸಿಬಿ ಬಳಸಿ ಬಹುತೇಕ ಅಂಗಡಿಗಳನ್ನು ನೆಲಸಮಗೊಳಿಸುವಲ್ಲಿ ಕಾರಣವಾಯಿತು.

ಇಂದಿರಾ ಕ್ಯಾಂಟೀನ್: ರಬಕವಿ-ಬನಹಟ್ಟಿ ನಗರದ ಮಧ್ಯ ಭಾಗವಾಗಿರುವ ಸಮುದಾಯ ಆಸ್ಪತ್ರೆ ಕೇಂದ್ರದ ಮುಂಭಾಗದಲ್ಲಿ ಇಂದಿರಾ ಕ್ಯಾಂಟೀನ್ ನಿರ್ಮಾಣ ಮಾಡುವ ಸಲುವಾಗಿ ಅತಿಕ್ರಮಣ ತೆರವು ಅನಿವಾರ್ಯವಾಯಿತೆಂದು ಪೌರಾಯುಕ್ತ ಜಗದೀಶ ಈಟಿ ತಿಳಿಸಿದರು.

## ಉತ್ತಮ ವಾತಾವರಣ ನಿರ್ಮಿಸುವದೇ ಸೇವಾದಳದ ಉದ್ದೇಶ: ಶ್ರೀಶೈಲ ಬುರ್ಲಿ



**ರಬಕವಿ :** ಸ್ವಯಂ ಸ್ವಚ್ಚತೆ, ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಚವಾಗಿಟ್ಟುಕೊಳ್ಳುವುದು, ಹಾಗೂ ಪರಿಸರ ಪ್ರೇಮ, ಸಮಯ ಪ್ರಜ್ಞೆಯನ್ನು ಮಕ್ಕಳಲ್ಲಿ ಬೆಳೆಸುವುದರ ಜೊತೆಗೆ ಸೇವಾ ಮನೋಭಾವ ಬೆಳೆಸುವುದೇ ಸೇವಾದಳದ ಮುಖ್ಯ ಉದ್ದೇಶವೆಂದು ಶಿಕ್ಷಣ ಸಂಯೋಜಕ ಶ್ರೀಶೈಲ ಬುರ್ಲಿ ಹೇಳಿದರು.

ಇಲ್ಲಿಯ ಎಮ್. ವ್ಹಿ. ಪಟ್ಟಣ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ಸೇವಾದಳ ಶಿಕ್ಷಕರ ಪುನಶ್ಚೇತನ ಶಿಬಿರ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು ಸೇವಾದಳ ದೈಹಿಕ ಶಿಕ್ಷಣದ ಒಂದು ಭಾಗವಾಗಿದ್ದು , ಉತ್ತಮ ವಾತಾವರಣ ನಿರ್ಮಾಣ ಮಾಡುವಲ್ಲಿ ಸೇವಾದಳ ಮುಖ್ಯ ಪಾತ್ರವಹಿಸುತ್ತದೆ. ವಿದ್ಯಾರ್ಥಿಗಳ ಉತ್ತಮ ಜೀವನಕ್ಕೆ ಸೇವಾದಳ ಅಡಿಪಾಯ. ಶಿಬಿರದಲ್ಲಿ ಪಡೆದಿರುವ ತರಬೇತಿಗಳು ತರಗತಿ ಕೋಣೆಗಳಿಗೆ ಹೋದಾಗ ತರಬೇತಿ ಪಡೆದುಕೊಂಡಿದ್ದು ಸಾರ್ಥಕವಾಗುತ್ತದೆ. ಮಕ್ಕಳಲ್ಲಿ ಶಿಸ್ತನ್ನು ಮೂಡಿಸುವುದು ಮುಖ್ಯವೆಂದರು.

ಕೇಂದ್ರ ಸಮೀತಿ ಸದಸ್ಯ ವಿಶ್ವನಾಥ ಪಾಟೀಲ ಹಾಗೂ ಮಹೇಶ ಪತ್ತಾರ ಮಾತನಾಡಿ ರಾಷ್ಟ್ರ ಧ್ವಜ, ರಾಷ್ಟ್ರಗೀತೆಯ ಮಹತ್ವ ಹಾಗೂ ರಾಷ್ಟ್ರಾಭಿಮಾನವನ್ನು ಮಕ್ಕಳಲ್ಲಿ ಮೂಡಿಸಬೇಕಾಗಿದೆ. ಮಕ್ಕಳಲ್ಲಿ ಸೇವಾದಳದ ಮಹತ್ವ ತಿಳಿಸುವುದು ಹಾಗೂ ಇಂತಹ ತರಬೇತಿಗಳು ಅವಶ್ಯಕ. ಇದರ ಸದುಪಯೋಗ ಮಾಡಿಕೊಳ್ಳಬೇಕೆಂದರು. ತಾಲೂಕಾ ಅಧಿನಾಯಕ ಎಂ. ಕೆ. ಜಿಡ್ಡಿಮನಿಯವರನ್ನು ಆಯ್ಕೆ ಮಾಡಲಾಯಿತು.

ರಾಜು ನಂದೆಪ್ಪನವರ ಅಧ್ಯಕ್ಷತೆ ವಹಿಸಿದ್ದರು. ಸಂಜು ಅಮ್ಮಣಗಿ, ಮಹಾದೇವ ಹೆರಕಲ್ಲ , ಬಿ.ಎಸ್.ಪಾಟೀಲ ಸೇರಿದಂತೆ ಸೇವಾದಳ ಶಿಬಿರಾರ್ಥಿಗಳು ಭಾಗವಹಿಸಿದ್ದರು. ವಿಶ್ವನಾಥ ಉಪ್ಪಿನ ಸ್ವಾಗತಿಸಿದರು. ಎ. ಎಸ್. ಪಾಟೀಲ ನಿರೂಪಿಸಿದರು. ಬಿ. ಎಸ್. ಮಠಪತಿ ವಂದಿಸಿದರು.

## ಗಾನ ಮುಗಿಸಿದ ಗಾನ ಗಾರುಡಿಗ ಮಹಾದೇವಪ್ಪ ಹುಲ್ಯಾಳ



**ಮುಧೋಳ :** ಬಾಲ್ಯದಲ್ಲಿ ಪಾರಿಜಾತ ಕ್ಷೇತ್ರದಲ್ಲಿ ಪಾದಾರ್ಪಣೆ ಮಾಡಿ ಸತ್ಯಭಾಮೆ ಪಾತ್ರ ಮಾಡಿ ಸೈ ಎನಿಸಿಕೊಂಡ ಮಹಾದೇವಪ್ಪ ಚಿಮ್ಮಡ ಕೆಲವೇ ದಿನಗಳಲ್ಲಿ ನಾಡಿನಲ್ಲಿ ಗಾನ ಸುಧಾಕರರೆಂದೆ ಪರಿಚಿತರಾದರು. ಮೂಲತಃ ಜಮಖಂಡಿ ತಾಲೂಕಿನ ಸುಕ್ಷೇತ್ರ ಹುಲ್ಯಾಳ ಗ್ರಾಮವು ಅವರಿಗೆ ಜನ್ಮ ನೀಡಿದ ಊರು. ಸುಮಾರು ಅರವತ್ತು ವರ್ಷಕ್ಕೂ ಹೆಚ್ಚು ಕಾಲ ಸುಧೀರ್ಘವಾಗಿ ಶಿವ ಭಜನಾ ಕ್ಷೇತ್ರದಲ್ಲಿ ಪಯಣವನ್ನು ಬೆಳೆಸಿಕೊಂಡು ಬಂದವರು. ಸಂಗೀತ ಗುರುಗಳಾದ ಮಧುರಖಂಡಿಯ ಗುಂಡು ಪಂತ್ ಹೂಗಾರ ಹಾಗೂ ಪಂಡಿತ್ ಅರ್ಜುನ್ ಸಾ ನಾಕೋಡ್ ಗುರುಗಳ ಹಾರೈಕೆಯಿಂದ ಶ್ರೀಮನ್ ನಿಜಗುಣ ಶಿವಯೋಗಿಗಳ ಸರ್ಪಭೂಷಣ ಶಿವಯೋಗಿಗಳ ಕನಕ-ಪುರಂದರ ಪದ್ಯಗಳನ್ನು ತಮ್ಮ ಸುಶ್ರಾವ್ಯ ಕಂಠದಿಂದ ಹಾಡಿ ಪ್ರತಿಯೊಬ್ಬರ ಮನಸ್ಸನ್ನು ಗೆದ್ದ ಮಹಾನ್ ಗಮಕ ಕಲಾವಿದರು ಮಹಾದೇವಪ್ಪನವರು. ಸುದೀರ್ಘ ಕಾಲ ಕಲಾಸೇವೆ ಮಾಡಿದ ಇವರಿಗೆ ಸಂಗೀತ ಮತ್ತು ನೃತ್ಯ ಅಕಾಡೆಮಿಯು "ಕರ್ನಾಟಕ ಕಲಾಶ್ರೀ" ಮುಧೋಳ ಗಾನಯೋಗಿ ಶ್ರೀ ಪಂಚಾಕ್ಷರಿ ಕಲಾವಿದರ ಸಂಘವು" ಸಾಧನಾ ಸಂಪನ್ನ ಡಾ. ಕದ್ರಿನಾಥ ಗೋಪಾಲ ಪ್ರಶಸ್ತಿ ಸೇರಿದಂತೆ ನೂರಾರು ಗೌರವ ಪ್ರಶಸ್ತಿಗಳು ಲಭ್ಯವಾಗಿವೆ. ಗಾನಸುಧಾಕರ, ಗಾನಗಾರುಡಿಗ, ಸರಸ್ವತಿ ಪುತ್ರ, ಭಜನಾ ಭಾಸ್ಕರ್, ಗಾನ ಕೋಗಿಲೆ ಹೀಗೆ ಹಲವಾರು ಬಿರುದುಗಳಿಗೆ ಭಾಜನರಾದವರು. ಮಹಾದೇವಪ್ಪ ಹುಲ್ಯಾಳ ಎಂದರೆ "ನಿಜಗುಣರ ಅವತಾರ" ಎಂದು ಪ್ರಶಂಸೆಗೆ ಪಾತ್ರರಾದವರು.

ಮಹಾದೇವಪ್ಪನವರ ಹಾಡು ಕೇಳಲು ಸಾಗರೋಪಾದಿಯಲ್ಲಿ ಜನ ಸೇರುತ್ತಿತ್ತು. ಹಾಡಿದರೆ ಮಹಾದೇವಪ್ಪನವರಂತೆ ಹಾಡಬೇಕೆಂಬ ಛಾಪು ಮೂಡಿಸಿದವರು. ಬಾಗಲಕೋಟೆ,ಬೆಳಗಾವಿ, ವಿಜಯಪುರ, ಧಾರವಾಡ, ಗದಗ ಮುಂತಾದ ಜಿಲ್ಲೆಗಳಲ್ಲಿ ಸಂಚರಿಸಿ ಆಧ್ಯಾತ್ಮಿಕ, ಧಾರ್ಮಿಕ, ಸಾಂಸ್ಕೃತಿಕ ವಾತಾವರಣವನ್ನು ಗಟ್ಟಿಗೊಳಿಸಿದವರು. ಇವತ್ತಿಗೂ ಯುಟ್ಯೂಬ್ ನಲ್ಲಿ, ಸಿ.ಡಿ.ಗಳಲ್ಲಿ ಎನ್ನನೆ ಪಾಲಿಸು ಪುಣ್ಯಮಯಗಾತ್ರ, ಕಾಯೋ ಸುಖ ಸಾರ ನೀನುಪಕಾರ, ಕೋಗಿಲೆ ಚೆಲ್ವ ಕೋಗಿಲೆ, ಏತಕೆ ಚಿಂತೆಯನ್ನು ಮಾಡುವಿ ಮೂಢಾ, ಗುರು ದರುಶನವಾಯಿತು ಎಮಗೆ ಇಂತಹ ನೂರಾರು ಹಾಡುಗಳು ಕೇಳುಗರಿಗೆ ಮುದ ನೀಡುತ್ತಿವೆ. ಇಂತಹ ನಾಡು ಕಂಡ ಅಪರೂಪದ ಕಲಾವಿದನಿಗೆ ಆರೋಗ್ಯವು ಕೈ ಕೊಟ್ಟಿತು. ಕೆಲ ದಿನಗಳಿಂದ ಅನಾರೋಗ್ಯದಿಂದ ಬಳಲುತ್ತಿದ್ದ ಮಹಾದೇವಪ್ಪ ಜುಲೈ ೬ ರಂದು ಮುಂಜಾನೆ ೧೦.೩೦ ಕ್ಕೆ ನಿಧನರಾದರು. ಅವರು ತಮ್ಮ ಹಿಂದೆ ಪತ್ನಿ , ಓರ್ವ ಪುತ್ರ, ನಾಲ್ಕು ಜನ ಪುತ್ರಿಯರು ಹಾಗೂ ಅಪಾರ ಶ್ರೋತೃಗಳ ಬಳಗವನ್ನು ಅಗಲಿದ್ದಾರೆ. ಕಲಾವಿದರ ಒಕ್ಕೂಟದ ಜಿಲ್ಲಾಧ್ಯಕ್ಷ ಬಸವರಾಜ ಲಕ್ಷ್ಮೇಶ್ವರ ಸಂತಾಪ ಸೂಚಿಸಿದ್ದಾರೆ.

## ಆಸ್ತಿ ತೆರಿಗೆಯಲ್ಲಿ ರಿಯಾಯ್ತಿ: ಜುಲೈ 31 ರವರೆಗೆ ವಿಸ್ತರಣೆ

**ರಬಕವಿ-ಬನಹಟ್ಟಿ :** ಪ್ರಸಕ್ತ ವರ್ಷದ 2024-25 ನೇ ಸಾಲಿನ ಆರ್ಥಿಕ ವರ್ಷದ ಮಾರುಕಟ್ಟೆ ಮಾರ್ಗಸೂಚಿಯಂತೆ ಬೆಲೆಯನ್ನು ಪರಿಷ್ಕರಣೆ ಮಾಡಿರುವ ನಗರಸಭೆಯು ಸದರಿ ದರಗಳ ಆಧಾರದ ಮೇರೆಗೆ ಆಸ್ತಿ ತೆರಿಗೆಯನ್ನು 2024-25 ನೇ ಸಾಲಿನದ್ದುಏಪ್ರಿಲ್‌ತಿಂಗಳಅಂತ್ಯಕ್ಕೆ ಶೇ. ಐದರಷ್ಟು ವಿನಾಯಿತಿಯನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಕಲ್ಪಿಸಲಾಗಿರುವದನ್ನು

ಜುಲೈ 31 ರವರೆಗೆ ವಿಸ್ತರಣೆ ಮಾಡಲಾಗಿದೆಯೆಂದು ನಗರಸಭೆ ಪೌರಾಯುಕ್ತ ಜಗದೀಶ ಈಟಿ ತಿಳಿಸಿದ್ದಾರೆ. ಈಗಾಗಲೇ ತೆರಿಗೆ ತುಂಬಿದ ಜನತೆಗೆ ಅಭಿನಂದಿಸಿದ ಪೌರಾಯುಕ್ತರು ಇನ್ನುಳಿದ ಎಲ್ಲ ಆಸ್ತಿ ತೆರಿಗೆದಾರರು ಇದರ ಸದುಪಯೋಗ ಪಡೆದುಕೊಂಡು ನಗರದ ಅಭಿವೃದ್ಧಿಗಾಗಿ ಸಹಕರಿಸುವಂತೆ ಕೋರಿದ್ದಾರೆ.

## ಮೆಟ್ರಿಕ್ ಪೂರ್ವ, ನಂತರದ ವಿದ್ಯಾರ್ಥಿ ನಿಲಯಕ್ಕೆ ಅರ್ಜಿ

**ಬಾಗಲಕೋಟೆ :** ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ, ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟಜಾತಿಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳು ಜುಲೈ 10 ರೊಳಗಾಗಿ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳು ಜುಲೈ 15 ರೊಳಗಾಗಿ ಮ್ಯಾನುವಲ್ ಮೂಲಕ ಎಲ್ಲ ದಾಖಲಾತಿಗಳಾದ ಆಧಾರ ಕಾರ್ಡ್, ಆರ್.ಡಿ ನಂಬರ್ ಹೊಂದಿರುವ ಜಾತಿ ಹಾಗೂ ಆದಾಯ ಪ್ರಮಾಣ ಪತ್ರ, ಹಿಂದಿನ ತರಗತಿಯ ಅಂಕಪಟ್ಟಿ, ಪೋಟೋ, ಮೊಬೈಲ್ ನಂಬರ, ಸಂಬಂಧಪಟ್ಟ ಮುಖ್ಯೋಪಾದ್ಯಾಯರಿಂದ ದೃಡೀಕರಿಸಿ ಪೂರಕ ದಾಖಲೆಗಳೊಂದಿಗೆ ಸಂಬಂಧಿಸಿದ ವಸತಿ ನಿಲಯಗಳಿಗೆ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಹುನಗುಂದ ದೂಸಂ.08351-260583 ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಕುರಿ, ಮೇಕೆ ಘಟಕ ಸ್ಥಾಪನೆಗೆ ಅರ್ಜಿ

**ಬಾಗಲಕೋಟೆ :** ಪ್ರಸಕ್ತ ಸಾಲಿಗೆ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ಬಾಗಲಕೋಟೆ ವತಿಯಿಂದ ಅಮೃತ ಸ್ವಾಭಿಮಾನಿ ಕುರಿಗಾಯಿ ಯೋಜನೆಯಡಿ ಕುರಿ, ಮೇಕೆ ಘಟಕ (20+1) ಸ್ಥಾಪಿಸುವ ಸಲುವಾಗಿ ಜಿಲ್ಲೆಯಲ್ಲಿ ನೊಂದಾಯಿತ ಅರ್ಹ ಸಹಕಾರ ಸಂಘಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಫಲಾನುಭವಿಗಳು ರಾಜ್ಯ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಸದಸ್ಯರಾಗಿದ್ದು, 18 ರಿಂದ 60 ವರ್ಷ ವಯಸ್ಸಿನವರಾಗಿರಬೇಕು. ಸಂಘವು ಕಳೆದ ಮೂರು ವರ್ಷ ಪೂರೈಸಿದ ಲೆಕ್ಕ ಪರಿಶೋಧನೆ ವರದಿ ಇರಬೇಕು. ಸಂಘವು ಚಾಲ್ತಿ ಇರುವ ಬಗ್ಗೆ ಸಹಕಾರ ಸಂಘದಿಂದ ದೃಢೀಕರಣ ಪತ್ರ ಹೊಂದಿರಬೇಕು. ಭರ್ತಿ ಮಾಡಿದ ಅರ್ಜಿಗಳನ್ನು ಪ್ರಕಟಣೆಗೊಂಡ 10 ದಿನಗಳ ಒಳಗಾಗಿ ಸಂಘದ ಅಧ್ಯಕ್ಷರು, ಕಾರ್ಯದರ್ಶಿ ಮುಖಾಂತರ ಖುದ್ದಾಗಿ ಜಿಲ್ಲಾ ನಿಗಮಕ್ಕೆ ಬಂದು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ, ಬಾಗಲಕೋಟೆ ಮೊನಂ.8660264814 ಇವರಿಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ವಿಕಲಚೇತನರಿಗೆ ರಾಷ್ಟ್ರ ಪ್ರಶಸ್ತಿ ನೀಡಲು ಅರ್ಜಿ

**ಬಾಗಲಕೋಟೆ :** ಪ್ರಸಕ್ತ ಸಾಲಿಗೆ ನವದೆಹಲಿಯ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಾಲಯವು ವಿಕಲಚೇತನರ ಸಬಲೀಕರಣಕ್ಕಾಗಿ ವಿವಿಧ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಅರ್ಹ ವ್ಯಕ್ತಿಗಳಿಗೆ ಹಾಗೂ ಸಂಸ್ಥೆಗಳಿಗೆ ರಾಷ್ಟ್ರ ಪ್ರಶಸ್ತಿ ನೀಡಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ವೆಬ್‌ಸೈಟ್ ನಲ್ಲಿ ಜುಲೈ 31 ರೊಳಗಾಗಿ ಸಲ್ಲಿಸುವಂತೆ ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಸವಿತಾ ಕಾಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಬಾಗಲಕೋಟೆ ಜಿಲ್ಲಾ ಸಂಯೋಜಕ ಪ್ರತಿಭಾ ಮಾದರ (9606151149), ಪಾಂಡು ಲಮಾಣಿ (9538714441), ಬಾದಾಮಿ ಮತ್ತು ಗುಳೇದಗುಡ್ಡ ತಾಲೂಕಿನ ಎಮ್.ಬಿ.ಪಾಟೀಲ (9481135932), ಹುನಗುಂದ ಮತ್ತು ಇಳಕಲ್ಲ ತಾಲೂಕಿನ ಎಸ್.ಟಿ.ಬೀರಗೊಂಡರ (8970565869), ಬೀಳಗಿ ತಾಲೂಕಿನ ಕಾವ್ಯಾ ಛಬ್ಬಿ (7676980002), ಮುಧೋಳ ತಾಲೂಕಿನ ಎಂ.ಬಿ.ಮುದ್ನೂರ (9008173773), ಜಮಖಂಡಿ ತಾಲೂಕಿನ ಎನ್.ಬಿ.ಹನಗಂಡಿ (9900417764), ರಬಕವಿ-ಬನಹಟ್ಟಿ ತಾಲೂಕಿನ ಶಬ್ಬಿರ ಪಕಾಲಿ (9739936205)ಗೆ ಸಂಪರ್ಕಿಸಬಹುದಾಗಿದೆ.

## ಗರ್ಭಿಣಿಯರು ಮತ್ತು ಅಂಗನವಾಡಿ ಮಕ್ಕಳ ಆರೋಗ್ಯ ರಕ್ಷಣೆ ಮುಖ್ಯ



**ಮಹಾಲಿಂಗಪುರ :** ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ಆಶಾ ಕಾರ್ಯಕರ್ತೆಯರು ಅಂಗನವಾಡಿ ಮಕ್ಕಳ ಮತ್ತು ಗರ್ಭಿಣಿ ಹಾಗೂ ಬಾಣಂತಿಯರ ಆರೋಗ್ಯ ರಕ್ಷಣೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ತಾಲೂಕಾ ಆಶಾ ಕಾರ್ಯಕರ್ತೆಯರ ಮೆಂಟರ್ ಜ್ಯೋತಿ ಗಲಗಲಿ ಹೇಳಿದರು.

ಶುಕ್ರವಾರ ಸಮೀಪದ ಸೈದಾಪೂರ ಗ್ರಾಮದ ಅರ್ಭಿಣಿ ಮತ್ತು ಬಾಣಂತಿಯರ ಮನೆಗಳ ಭೇಟಿ ಹಾಗೂ ಶಾಲೆಯ ಅಡುಗೆ ಕೋಣೆಗಳ ಸ್ವಚ್ಛತೆಯ ಜಾಗೃತಿ ಮತ್ತು ಲಾರ್ವ ಸರ್ವೇ ಮನೆ ಮನೆಗೆ ಭೇಟಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ನಂತರ ದೇವಸ್ಥಾನದಲ್ಲಿ ಜರುಗಿದ ಆಶಾ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು ಇಂದು ಆರೋಗ್ಯ ಭಾಗ್ಯವೇ ಪ್ರಮುಖವಾಗಿರುವದರಿಂದ ಎಲ್ಲರೂ ಆರೋಗ್ಯ ರಕ್ಷಣೆಗೆ ಹೆಚ್ಚಿನ ಅಧ್ಯತೆ ನೀಡಬೇಕು ಎಂದರು.

ಗ್ರಾಪಂ ಅಧ್ಯಕ್ಷ ಪಿಯುಷ್ ಓಸ್ವಾಲ್ ಸಭೆಯನ್ನು ಉದ್ಘಾಟಿಸಿದರು. ಗ್ರಾಪಂ ಪಿಡಿಓ ಹಿರೇಕುರಬರ, ಆಶಾ ಸುಗಮಕಾರ ಬೋರವ್ವ ತುಪ್ಪದ, ಗ್ರಾಪಂ ಸದಸ್ಯ ಪ್ರಕಾಶ ಪಟ್ಟಣಶೆಟ್ಟಿ, ವಿದ್ದರಣಾ ಘಟಕದ ಸಿಎಚ್‌ಓ ದೀಪಾ ದುರ್ಗಾಣಿ ಅತಿಥಿಗಳಾಗಿ ಭಾಗವಹಿಸಿದ್ದರು.

ಆಶಾ ಕಾರ್ಯಕರ್ತೆಯರಾದ ಸಿ.ವಾಯ್.ಪೂಜೇರಿ, ಮಲಿಕಮಾ ನದಾಫ್, ದಾಯಿಅಲಿಮಾದಂಡಿ, ಸುವರ್ಣ ಕಂಕನವಾಡಿ, ಅಂಗನವಾಡಿ ಕಾರ್ಯಕರ್ತೆಯರಾದ ಎಸ್. ಎಂ. ಹಿರೇಮಟ ಸಂದ್ರಾ ಉಗಾರೆ, ಎಸ್. ಆರ್.ಸ್ವಾಮಿ ಸೇರಿದಂತೆ ಹಲವರು ಇದ್ದರು.

## ಸಾಂಸ್ಕೃತಿಕ ಬಳುವಳಿ ಉಳಿಸಿ ಬೆಳೆಸೋಣ



**ಧಾರವಾಡ :** ಜನಪದ ಸಾಹಿತ್ಯಕ್ಕೆ ನಮ್ಮ ಬದುಕನ್ನುತಿದ್ದಿ ಸಂಸ್ಕಾರಗೊಳಿಸುವ ಶಕ್ತಿ ಇದೆ. ಇದೊಂದು ಮೋಹಕ ಸಾಹಿತ್ಯವಾಗಿದೆಎಂದು ಕ.ವಿ.ವ ಸಂಘದಕಾರ್ಯಕಾರಿ ಸಮಿತಿ ಸದಸ್ಯ ವೀರಣಒಡ್ಡೀನ ಹೇಳಿದರು.

ಅವರುಕರ್ನಾಟಕ ವಿದ್ಯಾವರ್ಧಕ ಸಂಘವು ಡಾ.ಸರೋಜಿನಿ ಶಿಂತ್ರಿ ದತ್ತಿ ಅಂಗವಾಗಿ ಆಯೋಜಿಸಿದ್ದ ಭಜನಾ ಪದಗಳು ಹಾಗೂ ಜಾನಪದ ಗೀತೆಗಳ ಕಾರ್ಯಕ್ರಮದಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಾನಪದಸಾಹಿತ್ಯಸಾಗರದಷ್ಟುಆಳ,ಆಕಾಶದಷ್ಟು ವಿಶಾಲವಾಗಿದ್ದು, ಇದು ನಮ್ಮಜನಪದರಜೀವ 'ನಾನುಭವದರಸಘಟ್ಟಿ. ನಮ್ಮಜನಪದರುಅನ ಕ್ಷರಸ್ಥರಾಗಿದ್ದರೂಕಾವ್ಯಕಟ್ಟಿ ಭಾವನಾತ್ಮಕವಾಗಿ ಹಾಡುವ ಕಲೆ ಕರಗತ ಮಾಡಿಕೊಂಡಿದ್ದರು.ನ 'ಮ್ಮಜನಪದರುಜೀವನದಲ್ಲಿ ಪಟ್ಟ ಪಾಡುಗಳೇ ಹಾಡುಗಳಾಗಿ ರೂಪಗೊಂಡಿವೆ. ಜನಪದ ಸಾಹಿತ್ಯದಲ್ಲಿ ಪುರುಷರಿಗಿಂತ ಮಹಿಳೆಯರದೇ ಸಿಂಹಪಾಲು. ನಮ್ಮಜನಪದರು ಪುರಾಣ, ಪುಣ್ಯಕಥೆಗಳ ಶ್ರವಣದಿಂದಅಪಾರವಾದ ಲೋಕಾನುಭವ ಪಡೆದು ಕಾವ್ಯಗಳನ್ನು ಪಡಿಯಚ್ಚಿಗಿಳಿಸಿದ್ದಾರೆ.ಹೀಗಾಗಿ ನಮ್ಮ ಹಿರಿಯರು ನಮಗಾಗಿ ಬಿಟ್ಟುಹೋದ ಈ ಸಾಂಸ್ಕೃತಿಕ ಬಳುವಳಿಯನ್ನು ನಾವು ಉಳಿಸಿ, ಬೆಳೆಸಿಕೊಂಡು ಹೋಗಬೇಕಾಗಿದೆಎಂದರು.

ಅತಿಥಿಯಾಗಿ ಆಗಮಿಸಿದ್ದ ವೈದ್ಯಾಧಿಕಾರಿಡಾ. ರಾಜಶೇಖರ ಬಶೆಟ್ಟಿ ಮಾತನಾಡಿ, ಡಾ.ಸರೋಜಿನಿ ಶಿಂತ್ರಿಯವರು ಸ್ತ್ರೀ ಸಂವೇದನಾ ಬರಹಗಾರರು ಮತ್ತು ಹೆ ೞರಾಟಗಾರ ರಾಗಿದ್ದರು. ವಿದ್ಯಾರ್ಥಿಗಳಿಗೆ ಜೀವನ ಶಿಕ್ಷಣ ನೀಡುವಲ್ಲಿಅವರ ಪಾತ್ರ ಮಹತ್ವದ್ದಾಗಿತ್ತು.ಅವರುಆಂಗ್ಲ ಭಾಷಾ ಪ್ರಾಧ್ಯಾಪಕರಾಗಿದ್ದರೂಜಾನಪದ ಕಲೆ, ಹಾಗೂ ಕಲಾವಿದರನ್ನು ಪ್ರೋತ್ಸಾಹಿಸಿದವರು.ಶಿಸ್ತು ಸಮಯ ಪ್ರಜ್ಞೆಗೇಇನ್ನೊಂದು ಹೆಸರೇಡಾ.ಸರೋಜಿನಿ ಶಿಂತ್ರಿ.ಅವರ ಸಾಧನೆ ಅನುಪಮ ಎಂದರು.

ಉಪ್ಪಿನಬೆಟಗೇರಿಯ ಶ್ರೀ ಮಲ್ಲಿಕಾರ್ಜುನ ಭಜನಾತಂಡದವರುಅತ್ಯಂತ ಸೊಗಸಾಗಿ ಜಾನಪದ ಗೀತೆಗಳನ್ನು ಹಾಗೂ ಭಜನಾ ಪದಗಳನ್ನು ಪ್ರಸ್ತುತಪಡಿಸಿದರು.

ಡಾ. ಸರೋಜಿನಿ ಶಿಂತ್ರಿ ಅವರ ಭಾವಚಿತ್ರಕ್ಕೆ ವೇದಿಕೆಯಲ್ಲಿನಗಣ್ಯಮಾನ್ಯರು ಪುಷ್ಪನಮನ ಮಾಡಿಗೌರವ ಸಲ್ಲಿಸಿದರು.ವೇದಿಕೆಯಲ್ಲಿ ಬಸಪ್ಪಬಿಜಾಪುರಹಾಗೂಬಸವರಾಜಬೆಳವಗಿ ಇದ್ದರು.ಸಹಕಾರ್ಯದರ್ಶಿ ಶಂಕರ ಕುಂಬಿ ಸ್ವಾಗತಿಸಿದರು.ಕೋಶಾಧ್ಯಕ್ಷ ಸತೀಶತುರಮರಿ ಪ್ರಾಸ್ತಾವಿಕವಾಗಿ ಮಾತನಾಡಿದರು.ಜುಲೈ ತಿಂಗಳ ಕಾರ್ಯಕ್ರಮಗಳ ಸಂಚಾಲಕ ಡಾ.ಧನವಂತ ಹಾಜವಗೋಳ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಶಿವಾನಂದ ಭಾವಿಕಟ್ಟಿ, ಎಸ್. ಜಿ. ಪಾಟೀಲ, ಪ್ರಮೀಳಾ ಜಕ್ಕಣ್ಣವರ, ಮಧುಮತಿ ಸಣಕಲ್ಲ. ಮಹಾಂತೇಶ ನರೇಗಲ್ಲ, ಎಂ. ಬಿ. ಹೆಗ್ಗೇರಿ ವಿ. ಬಿ. ಸಂತೋಜಿ ಸೇರಿದಂತೆಅನೇಕರು ಭಾಗವಹಿಸಿದ್ದರು.

## ಜಿಲ್ಲಾ ಮಟ್ಟದ ಡಿಸಿಸಿ ಮತ್ತು ಡಿಎಲ್‌ಆರ್‌ಎಸ್ ಸಭೆಕೃಷಿ-ಶಿಕ್ಷಣ-ವ್ಯವಹಾರ ಸಾಲಗಳಿಗೆ ಒತ್ತು ನೀಡಿ ಪ್ರಗತಿ ಸಾಧಿಸಲು ಸಿಇಓ ಸೂಚನೆ

**ವಿಜಯಪುರ :** ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ವಿವಿಧ ಬ್ಯಾಂಕುಗಳಿಂದ ಒಟ್ಟು 17093 ಕೋಟಿ ರೂ. ಸಾಲ ಒದಗಿಸಿದ್ದು, ಕಳೆದ ವರ್ಷಕ್ಕಿಂತ ಶೇ.3.88 ಪ್ರಗತಿ ಸಾಧಿಸಲಾಗಿದೆ. ಕೃಷಿ, ಶಿಕ್ಷಣ, ವ್ಯವಹಾರ ಮನೆ ಸಾಲಗಳ ಮೇಲೆ ಒತ್ತು ನೀಡಿ ಇನ್ನಷ್ಟು ಹೆಚ್ಚಿನ ಪ್ರಗತಿ ಸಾಧಿಸುವಂತೆ ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರಿಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಸೂಚನೆ ನೀಡಿದರು.

ಶನಿವಾರ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಅಗ್ರಣೀಯ ಬ್ಯಾಂಕ್ ವತಿಯಿಂದ ತ್ರೈಮಾಸಿಕ ಜಿಲ್ಲಾ ಸಲಹಾ ಸಮಿತಿ (ಡಿಎಲ್‌ಸಿ) ಸಭೆ ಹಾಗೂ ಜಿಲ್ಲಾ ಮಟ್ಟದ ಪರಿಶೀಲನಾ (ಡಿಎಲ್‌ಆರ್ಸಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಒಟ್ಟು ರೂ.17093 ಕೋಟಿ ರೂ. ಸಾಲ ಒದಗಿಸಿದ್ದು, ರೂ.18676 ಕೋಟಿ ಠೇವಣಿ ಇದೆ. ಕಳೆದ ವರ್ಷಕ್ಕಿಂತ 3.88% ಸಾಲದಲ್ಲಿ ಪ್ರಗತಿ ಸಾಧಿಸಿದ್ದು ಠೇವಣಿಯಲ್ಲಿ 12.02% ಪ್ರಗತಿ ಸಾಧಿಸಲಾಗಿದೆ. ಜೊತೆಗೆ ಪ್ರಸ್ತುತ 2024-25 ಸಾಲಿನಲ್ಲಿ 4.81% ಹೆಚ್ಚುವರಿ ಗುರಿ ಹೊಂದಿದ್ದು, ಎಲ್ಲ ಬ್ಯಾಂಕ್‌ಗಳು ತಮಗೆ ಕೊಟ್ಟ ಗುರಿಯನ್ನು ಸಾಧಿಸಲು ಹೆಚ್ಚಿನ ಸಂಖ್ಯೆಯಲ್ಲಿ ಕೃಷಿ, ಶಿಕ್ಷಣ, ವ್ಯವಹಾರ ಮನೆ ಸಾಲಗಳ ಮೇಲೆ ಒತ್ತು ನೀಡಿ ಪ್ರಗತಿ ಸಾಧಿಸಬೇಕು. ತೋಟಗಾರಿಕೆ ಇಲಾಖೆಗೆ ಜಿಲ್ಲೆಯ ಬೆಳೆ ವಿಮೆ ಬಗ್ಗೆ ಜಾಹೀರಾತು ನೀಡಲು ಎಲ್ಲಾ ಬೆಳೆ ವಿಮೆ ಪರಿಹಾರ ಅರ್ಜಿಗಳು ಮುಂದಿನ ಹದಿನೈದು ದಿನಗಳೊಳಗೆ ಪರಿಹರಿಸಬೇಕು ಮತ್ತು ಬ್ಯಾಂಕಿನವರಿಗೆ ಎಲ್ಲಾ ಸರಕಾರಿ ಸಾಲದ ಅರ್ಜಿಗಳನ್ನು ತುರ್ತಾಗಿ ವಿಲೇವಾರಿ ಮಾಡಬೇಕೆಂದು ಸೂಚನೆ ನೀಡಿದರು.

ಜಿಲ್ಲಾ ಉಪ ಪೊಲೀಸ್ ಅಧೀಕ್ಷಕರಾದ ಶಂಕರ ಮಾರಿಹಾಳ ಅವರು, ಮಾತನಾಡಿ, ಬ್ಯಾಂಕ್‌ಗಳಲ್ಲಿ ಹಾಗೂ ಎ.ಟಿ.ಎಮ್‌ಗಳಲ್ಲಿ ಸೈಬರ್ ಅಪರಾಧಗಳ ಕಡಿವಾಣಕ್ಕೆ ಕಡ್ಡಾಯವಾಗಿ ಸಿಸಿಟಿವಿ ಅಳವಡಿಸಿಬೇಕು ಹಾಗೂ ಸೈಬರ್ ವಂಚನೆಯಾಗದಂತೆ ತಡೆಗಟ್ಟಲು ಸಾರ್ವಜನಿಕರಲ್ಲಿ ಸೂಕ್ತ ತಿಳುವಳಿಕೆ-ಜಾಗೃತಿ ಮೂಡಿಸಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕ ನೇತಾಜಿ ಗೌಡರ್ ಜಿಲ್ಲೆಯ ತ್ರೈಮಾಸಿಕ ವರದಿ ಮಾರ್ಚ್ 2024 ಪೂರ್ಣ ವಿವರಣೆಯನ್ನು ಪ್ರಸ್ತುತ ಪಡಿಸಿದರು. ಈ ಸಂದರ್ಭದಲ್ಲಿ ಭಾರತೀಯ ರಿಜರ್ವ್ ಬ್ಯಾಂಕ್ ನ ಲೀಡ್ ಡಿಸ್ಟ್ರಿಕ್ಟ್ ಆಫೀಸರ್ ಅಲೋಕ್ ಸಿನ್ಹಾ, ನಬಾರ್ಡ್ ಜಿಲ್ಲಾ ಅಭಿವೃದ್ಧಿ ವ್ಯವಸ್ಥಾಪಕ ವಿಕಾಸ್ ರಾಠೋಡ, ಕೆನರಾ ಬ್ಯಾಂಕ್ ಕ್ಷೇತ್ರೀಯ ಕಾರ್ಯಾಲಯದ ರೇಣುಕಾ ಹಾಗೂ ಜಿಲ್ಲೆಯ ಎಲ್ಲ ಬ್ಯಾಂಕ್ ವ್ಯವಸ್ಥಾಪಕರು ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಸಂದರ್ಶನ

**ವಿಜಯಪುರ :** ವಿಜಯಪುರದ ಕೃಷಿ ಮಹಾವಿದ್ಯಾಲಯದಲ್ಲಿ ಅರ್ಥಶಾಸ್ತ್ರ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರ ಒಂದು ಹುದ್ದೆಗೆ ತಾತ್ಕಾಲಿಕ ನೇಮಕ ಮಾಡಿಕೊಳ್ಳಲು ಜುಲೈ 18ರಂದು ಬೆಳಗ್ಗೆ 11ಕ್ಕೆ ಸಂದರ್ಶನ ನಡೆಯಲಿದೆ ಎಂದು ಕೃಷಿ ಮಹಾವಿದ್ಯಾಲಯದ ಮುಖ್ಯಸ್ಥರು ತಿಳಿಸಿದ್ದಾರೆ. ಶೈಕ್ಷಣಿಕ ಅರ್ಹತೆಯುಳ್ಳ ಅಭ್ಯರ್ಥಿಗಳು ಸಂದರ್ಶನಕ್ಕೆ ಬರುವಾಗ ತಮ್ಮ ವಿದ್ಯಾರ್ಹತೆಗೆ ಸಂಬಂಧಪಟ್ಟ ಎಲ್ಲ ಮೂಲ ದಾಖಲೆಗಳನ್ನು ಹಾಗೂ ಮೂಲ ದಾಖಲೆಗಳ ಎರಡು ಝೆರಾಕ್ಸ್ ಪ್ರತಿ ತಮ್ಮ ಭಾವಚಿತ್ರದೊಂದಿಗೆ ಅರ್ಜಿನಮೂನೆಗೆಲಗತ್ತಿಸಿ,ಸಂದರ್ಶನಕ್ಕೆಆಗಮಿಸುವಾಗತೆಗೆದುಕೊಂಡು ಬರುವುದು ಯಾವುದೇ ಸಂದರ್ಭದಲ್ಲಿ ಅರ್ಜಿಯನ್ನು ಮುಂಗಡವಾಗಿ ಕಳುಹಿಸಬಾರದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08352-295411 ಮೊ:9880640287ನ್ನು ಸಂಪರ್ಕಿಸಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡೆಂಗ್ಯೂ, ಮಲೇರಿಯಾ ನಿಯಂತ್ರಣಕ್ಕಾಗಿ ನಗರಸಭೆ ಸಲಹೆ

**ಬಾಗಲಕೋಟೆ :** ಬಾಗಲಕೋಟೆ ನಗರಸಭೆಯು ನಗರದಲ್ಲಿ ಡೆಂಗ್ಯೂ, ಮಲೇರಿಯಾ ಇತ್ಯಾದಿ ಸಾಂಕ್ರಾಮಿಕ ರೋಗಗಳು ಹೆಚ್ಚುತ್ತಿದ್ದು, ಕಾರಣ ಮನೆಯ ಸುತ್ತಲೂ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಈ ಕೆಳಕಂಡ ನಿಯಂತ್ರಣ ಕ್ರಮಗಳನ್ನು ಅನುಸರಿಸುವಂತೆ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ಕೋರಿದ್ದಾರೆ.


ನಿಮ್ಮ ಮನೆಯ ಸುತ್ತ-ಮುತ್ತ ನೀರು ನಿಲ್ಲದಂತೆ ಹಾಗೂ ಮನೆ ಬಳಕೆಯಲ್ಲಿ ಬಳಸುವ ನೀರಿನ ಟ್ಯಾಂಕ್, ತೊಟ್ಟಿ ಬ್ಯಾರಲ್‌ಗಳನ್ನು ವಾರಕ್ಕೊಮ್ಮೆ ಖಾಲಿ ಮಾಡಿ ಒಣಗಿಸಿ ಪುನಃ ಬಳಕೆ ಮಾಡಬೇಕು. ಮನೆಯ ಕಿಟಕಿ ಬಾಗಿಲುಗಳಿಗೆ ಕೀಟ ತಡೆಗಟ್ಟುವ ಜಾಲರಿಗಳಲ್ಲಿ ಅಳವಡಿಸಕೊಳ್ಳಲು ಹಾಗೂ ಮಲಗುವಾಗ ತಪ್ಪದೇ ಸೊಳ್ಳೆ ಪರದೆಯನ್ನು ಉಪಯೋಗಿಸಬೇಕು. ತ್ಯಾಜ್ಯ ವಸ್ತುಗಳಾದ ಟೈರು ಎಳೆನೀರು ಚಿಪ್ಪು, ಒಡೆದ ಬಾಟಲ್ ಮುಂತಾದವುಗಳನ್ನು ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕು. ರಸ್ತೆ ಬದಿಯಲ್ಲಿ ತೆರೆದ ವಾತಾವರಣದಲ್ಲಿ ಕತ್ತರಿಸಿದ ಹಣ್ಣುಗಳನ್ನು ತಿನ್ನಬಾರದು.

ಮಾರಾಟ ಮಾಡುವದನ್ನು ನಿಷೇಧಿಸಲಾಗಿದೆ. ಹೋಟೆಲ್‌ಗಳಲ್ಲಿ ಸ್ವಚ್ಛತೆ, ನೈರ್ಮಲ್ಯತೆ ಕಾಪಾಡಿ ಸೊಳ್ಳೆರಹಿತ ಓವರ್ ಹೆಡ್ ಟ್ಯಾಂಕ್ ಹಾಗೂ ಅಂಡರ ಗ್ರೌಂಡ್ ಟ್ಯಾಂಕಗಳನ್ನು ನಿರ್ಮಿಸಬೇಕು. ಈ ಎಲ್ಲ ಮುಂಜಾಗ್ರತಾ ಕ್ರಮಗಳನ್ನು ಅನುಸರಿಸುವ ಮೂಲಕ ಸಾಂಕ್ರಾಮಿಕ ರೋಗ ಬರುವದನ್ನು ತಡೆಯುವಲ್ಲಿ ನಗರಸಭೆಯೊಂದಿಗೆ ಸಹಕರಿಸುವಂತೆ ಕೋರಿದ್ದಾರೆ.

## ವಸತಿ ನಿಲಯಗಳಿಗೆ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನ

**ಜಮಖಂಡಿ :** ಸನ್ 2024-25ನೇ ಸಾಲಿಗೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಹಾಗೂ ಇತರೆ ಜಾತಿಯ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ಪೂರ್ವ/ನಂತರದ ಬಾಲಕರ ಮತ್ತು ಬಾಲಕಿಯರ ವಸತಿ ನಿಲಯಗಳಲ್ಲಿ ಖಾಲಿವಿರುವ ಸ್ಥಳಗಳಿಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಇಲಾಖೆಯ ವೆಬ್‌ಸೈಟ್ https://swdhmis.karnataka.gov.in/ಗೆ ಭೇಟಿ ನೀಡಿ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ (2024-25) ಲಿಂಕ್‌ನ್ನು ಕ್ಲಿಕ್ ಮಾಡಿ ವಿದ್ಯಾರ್ಥಿಯ ಖಾತೆಯನ್ನು ಸೃಜಿಸಿಕೊಂಡು ನಂತರ ವಿದ್ಯಾರ್ಥಿ ಲಾಗಿನ್‌ನಲ್ಲಿ ಅರ್ಜಿ ಸಲ್ಲಿಸುವುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 20-07-2024 ಇರುತ್ತದೆ. ಆನ್‌ಲೈನ್ ಸ್ವೀಕೃತಿ (Acknowledgement) ಪ್ರತಿಯೊಂದಿಗೆ ತಮ್ಮ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ ಈ ಕಛೇರಿಗೆ ಸಲ್ಲಿಸುವುದು. ಒಂದು ವೇಳೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅನುಕೂಲ ಆಗದಿದ್ದಲ್ಲಿ ಮ್ಯಾನುವಲ್ ಮೂಲಕ ದಾಖಲೆಗಳನ್ನು ಲಗತ್ತಿಸಿ (2 ಪಾಸ್‌ಪೋರ್ಟ್ ಸೈಜ್ ಫೋಟೊ, ಕಳೆದ ಸಾಲಿನ ಅಂಕಪಟ್ಟಿ, ಜಾತಿ-ಆದಾಯ ಪ್ರಮಾಣ ಪತ್ರ, ಅಂತರ್ ಪ್ರಮಾಣ ಪತ್ರಹ ಾಗೂ ಆಧಾರ್ ಕಾರ್ಡ್ ನಕಲು ಪ್ರತಿ) ಈ ಕಾಯಾಲಯಕ್ಕೆ ಸಲ್ಲಿಸಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ ಕಛೇರಿಯ ವೇಳೆಯಲ್ಲಿ ಇಲ್ಲವೇ ದೂರವಾಣಿ ಸಂಖ್ಯೆ 9480843061 ಸಂಪರ್ಕಿಸಬೇಕೆಂದು ಸಮಾಜಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಸಿ.ಎಸ್. ಗಡ್ಡದೇವರಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹಾಲಿಂಗಪ್ಪ ಮಲಕಾಜಪ್ಪ ಕಟಗಿ ನಿಧನ



**ಮಹಾಲಿಂಗಪುರ :** ಪಟ್ಟಣದ ಮುಖ್ಯರಸ್ತೆ ಕಟಗಿ ಓಣಿಯ ನಿವಾಸಿ, ಬಣಜಿಗ ಸಮಾಜದ ಮಹಾಲಿಂಗಪ್ಪ ಮಲಕಾಜಪ್ಪ ಕಟಗಿ(77) ಗುರುವಾರ ನಿಧನರಾದರು. ಮೃತರು ಪತ್ನಿ, ಪುತ್ರಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

## ತೆರೆದ ಮನೆ ಪಾಠ ಕಾರ್ಯಕ್ರಮ



**ನವಲಗುಂದ :** ಪೊಲೀಸ್ ಠಾಣೆ ಕೇವಲ ಜನಸ್ನೇಹಿ ಠಾಣೆ ಮಾತ್ರವಲ್ಲ ಮಕ್ಕಳ ಸ್ನೇಹಿ ಠಾಣೆಯಾಗಿಯು ಕರ್ತವ್ಯ ನಿರ್ವಹಿಸುತ್ತಿದ್ದು ಮಕ್ಕಳು ತಮ್ಮ ಹಕ್ಕುಗಳ ಕುರಿತು ಕಾನೂನು ಜ್ಞಾನವನ್ನು ಪಡೆದು ಸುಭದ್ರ ಸಮಾಜ ನಿರ್ಮಾಣಕ್ಕೇ ಅಡಿಪಾಯ ಹಾಕಬೇಕೆಂದು ಪಿ.ಎಸ್.ಐ ಜನಾರ್ಧನ ಭಟ್ರಳ್ಳಿ ಮಕ್ಕಳಿಗೆ ಸಲಹೆ ನೀಡಿದರು.

ನವಲಗುಂದ ಪೊಲೀಸ್ ಠಾಣೆಯಲ್ಲಿ ತೆರೆದ ಮನೆ ಪಾಠ ಕಾರ್ಯಕ್ರಮದಲ್ಲಿ ಸರ್ಕಾರಿ ಉರ್ದು ಪ್ರೌಢ ಶಾಲೆಯ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಅವರು ವಿದ್ಯಾರ್ಥಿಗಳಿಗೆ ಮಕ್ಕಳ ಹಕ್ಕು ಕಾಯ್ದೆ, ಬಾಲ್ಯ ವಿವಾಹ, ಪೋಕ್ಸೋ ಕಾಯ್ದೆ, ಮಕ್ಕಳ ಸಹಾಯವಾಣಿ, ಸೈಬರ್ ಹೆಲ್ಪಲೈನ್, ತುರ್ತು ಸೇವೆಯ ಹೆಲ್ಪ್ ಲೈನ್ ಹಾಗೂ ಬಾಲ ಕಾರ್ಮಿಕರ, ಮತ್ತು ಅಪರಾಧ ಪ್ರಕರಣಗಳ ಬಗ್ಗೆ ಸಮಗ್ರ ಕಾನೂನು ತಿಳುವಳಿಕೆ ನೀಡಿದರು.

ಸರ್ಕಾರಿ ಉರ್ದು ಪ್ರೌಢ ಶಾಲೆಯ ಮುಖ್ಯ ಶಿಕ್ಷಕ ಡಿ.ಜಿ ಹುಲ್ಲೂರ ಮಾತನಾಡಿ ಇವತ್ತು ಜನಸ್ನೇಹಿ ಪೊಲೀಸ್ ಠಾಣೆಯಲ್ಲಿ ಆಯೋಜಿಸಿದ ತೆರೆದ ಮನೆ ಪಾಠ ಕಾರ್ಯಕ್ರಮದಿಂದ ನಮ್ಮ ಶಾಲೆಯ ಮಕ್ಕಳಿಗೆ ಅವರ ಹಕ್ಕುಗಳ ಕುರಿತು ಬಹಳ ತಿಳುವಳಿಕೆ ಪಡೆದರು, ಪೊಲೀಸ್‌ಠಾಣೆಎಂದರೆಭಯಪಡುವಂತಹಇಲಾಖೆ ಅಲ್ಲ, ಅದು ನಮ್ಮೆಲ್ಲರ ರಕ್ಷಣೆಗಾಗಿ ಇರುವಂತಹ ಒಂದು ಭದ್ರವಾದ ಕೋಟೆಯಾಗಿದೆ ಎಂದರು.

ಇದೆ ವೇಳೆ ಸರ್ಕಾರಿ ಉರ್ದು ಪ್ರೌಢ ಶಾಲೆಯ ಎಸ್.ಡಿ.ಎಂ.ಸಿ ಆಡಳಿತ ಮಂಡಳಿ ವತಿಯಿಂದ ರಾಣೆಬೆನ್ನೂರಿನ ಜೆ.ಎಂ.ರಾಜಶೇಖರ ಅವರು ಬರೆದ ಮಾಹಿತಿ ಹಕ್ಕು ದರ್ಬಾರ್ ಪುಸ್ತಕವನ್ನು ಸಿ.ಪಿ.ಐ ರವಿಕುಮಾರ ಕಪ್ಪತ್ತನವರ ಅವರಿಗೆ ಠಾಣೆಯಲ್ಲಿ ನೀಡಿದರು. ಸಿ. ಪಿ.ಐ ರವಿಕುಮಾರ ಕಪ್ಪತ್ತನವರ, ಎ.ಎಸ್.ಐ ಎಸ್.ಐ ಗದಗ, ವಿಜಯಕುಮಾರ ಸಲಕಿ, ನಿವೃತ್ತ ಎ.ಎಸ್.ಐ ಎಂ.ಎನ್.ತಡಸಿ, ಎಸ್.ಡಿ.ಎಂ.ಸಿ ಅಧ್ಯಕ್ಷ ಖಾಜೇಸಾಬ ಹಂಚಿನಾಳ, ಸಮಾಜ ಸೇವಕ ಮಾಬುಸಾಬ ಯರಗುಪ್ಪಿ, ರಿಯಾಜಅಹ್ಮದ ನಾಶಿಪುಡಿ, ಬಾಬುಶಾ ಮಕಾಂದಾರ, ಸುಲೇಮಾನ ಮುಳಗುಂದ, ಜಾಕಿರಹುಸೇನ್ ಧಾರವಾಡ, ಸಹ ಶಿಕ್ಷಕರಾದ ಮುಕ್ತಾರಅಹ್ಮದ ಕೊತ್ವಾಲ್, ಬಿ.ಎಸ್ ರಶ್ಮಿ, ಮೀರಾ ಒಡೆಯರ ಉಪಸ್ಥಿತರಿದ್ದರು.

## ನೂತನ ಜಿಲ್ಲಾಧಿಕಾರಿಯಾಗಿ ಮೊಹಮ್ಮದ್ ರೋಷನ್ ಅಧಿಕಾರ ಸ್ವೀಕಾರ



**ಬೆಳಗಾವಿ :** ಬೆಳಗಾವಿಯ ನೂತನ ಜಿಲ್ಲಾಧಿಕಾರಿಯಾಗಿ ಮೊಹಮ್ಮದ್ ರೋಷನ್ ಅವರು ಅಧಿಕಾರ ವಹಿಸಿಕೊಂಡರು.

ನಿಕಟಪೂರ್ವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಅಧಿಕಾರವನ್ನು ಹಸ್ತಾಂತರಿಸಿದರು.

2015 ನೇ ಬ್ಯಾಚಿನ ಐ.ಎ.ಎಸ್. ಅಧಿಕಾರಿಯಾಗಿರುವ ಮೊಹಮ್ಮದ್ ರೋಷನ್ ಅವರು, ಈ ಮುಂಚೆ ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದರು.

ರೋಷನ್, ಅವರು ಹಾವೇರಿ ಮತ್ತು ಉತ್ತಕ ಕನ್ನಡ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿಯೂ ಕಾರ್ಯನಿರ್ವಹಿಸಿರುತ್ತಾರೆ.

ಬೆಳಗಾವಿ ಜಿಲ್ಲಾಧಿಕಾರಿಯಾಗಿದ್ದ ನಿತೇಶ್ ಪಾಟೀಲ ಅವರು, ಕಿರು, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಇಲಾಖೆ ನಿರ್ದೇಶಕರಾಗಿ ವರ್ಗಾವಣೆಗೊಂಡಿರುತ್ತಾರೆ. ಬೆಳಗಾವಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಅವರು ನಿರ್ಗಮಿತ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರಿಗೆ ಶುಭಕೋರಿದರು.

ಇದೇ ವೇಳೆ ನೂತನ ಜಿಲ್ಲಾಧಿಕಾರಿಗಳಿಗೆ ಹೂಗುಚ್ಛ ನೀಡಿ ಬರಮಾಡಿಕೊಂಡರು. ಪ್ರೋಬೇಷನರಿ ಐ.ಎ.ಎಸ್. ದಿನೇಶ್ ಕುಮಾರ್ ಮೀನಾ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ ಮತ್ತಿತರರು ಉಪಸ್ಥಿತರಿದ್ದರು.

## ನಾವೆಲ್ಲರೂ ಪರಿಸರ ಸಂರಕ್ಷಣೆಗೆ ಪಣತೊಡಬೇಕು: ಅಮರೇಶ್ವರ ಶ್ರೀ



**ಅಥಣಿ :** ಪ್ರಕೃತಿಯ ಸೌಂದರ್ಯಕ್ಕೆ ಕೊಡಲಿ ಪೆಟ್ಟು ನೀಡಿದರೆ ನಮ್ಮೆಲ್ಲರ ಬದುಕಿಗೆ ಕೊಡಲಿ ಏಟು ನೀಡಿದಂತಾಗುತ್ತದೆ. ಅದಕ್ಕಾಗಿ ನಾವೆಲ್ಲರೂ ಪರಿಸರ ಸಂರಕ್ಷಣೆಯ ಜೊತೆಗೆ ಸಸಿ ನೆಡುವ ಪಣತೊಡಬೇಕಿದೆ ಎಂದು ಕವಲಗುಡ್ಡದ ಸಿದ್ಧಶ್ರೀ ಆಶ್ರಮದ ಅಮರೇಶ್ವರ ಸ್ವಾಮೀಜಿ ಕರೆ ನೀಡಿದರು.

ಅವರು ಮಂಗಳವಾರ ತಾಲೂಕಿನ ಸಂಬರಗಿ ಗ್ರಾಮದಲ್ಲಿ "ಟೀಮ್‌ಯೂಥ್‌ಫೌಂಡೇಶನ್" ಹಾಗೂ ಪ್ರಾದೇಶಿಕ ಅರಣ್ಯ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವನಮಹೋತ್ಸವ ಕಾರ್ಯಕ್ರಮದಲ್ಲಿ ಸಂಘಮಿತ್ರ ಪ್ರೌಢಶಾಲೆ ಹಾಗೂ ಹಿರಿಯ ಕನ್ನಡ ಪ್ರಾಥಮಿಕ ಶಾಲೆಗಳ ಆವರಣದಲ್ಲಿ ವನಮಹೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಗ್ರಾಮೀಣ ಪ್ರದೇಶದಲ್ಲಿ ಪರಿಸರ ಜಾಗೃತಿಯ ಕುರಿತು ಅರಿವು ಮೂಡಿಸುವ ಕಾರ್ಯವನ್ನು ಎಲ್ಲರೂ ಮಾಡಬೇಕಾಗಿದೆ. ಈ ನಿಟ್ಟಿನಲ್ಲಿ ಇಂದಿನ ಯುಗದಲ್ಲಿ ಯುವ ಪೀಳಿಗೆ ಆಸಕ್ತಿ ಬೆಳಿಸಿಕೊಂಡು ಗಿಡಗಳನ್ನುಬೆಳೆಸುವಸಂಕಲ್ಪತೊಡಬೇಕಾಗಿದೆಎಂದು ತಿಳಿಸಿದರು. ಈ ದಿಶೆಯಲ್ಲಿ ಬದಲಾವಣೆಯ ಹೆಜ್ಜೆ ಹಾಕುತ್ತಿರುವ ಯೂಥ್ ಫೌಂಡೇಶನ್ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಅಥಣಿ ವಲಯದ ಪ್ರಾದೇಶಿಕ ಅರಣ್ಯ ಅಧಿಕಾರಿ ಪ್ರಶಾಂತ ಗಾಣಿಗೇರ ಮಾತನಾಡಿ ಇಂದಿನ ದಿನಗಳಲ್ಲಿ ನಾವೆಲ್ಲರೂ ವಿಪರೀತವಾಗಿ ಏರಿಕೆಯಾಗುತ್ತಿರುವ ತಾಪಮಾನದ ಕುರಿತು ಗಂಭೀರವಾಗಿ ಚಿಂತನೆ ಮಾಡಬೇಕಿದೆ. ಗಿಡಮರಗಳನ್ನು ಹೆಚ್ಚಿಗೆ ಬಳಸಿ ಸಂರಕ್ಷಣೆಮಾಡುವುದುಪ್ರತಿಯೊಬ್ಬರಕರ್ತವ್ಯವಾಗಿದೆ. ಯೂತ್ ಫೌಂಡೇಶನ್ ಯುವಕರು ಗಿಡಗಳ ಸಂರಕ್ಷಣೆಗೆ ಮುಂದಾಗಿರುವುದು ಅನೇಕ ಸಂಘ ಸಂಸ್ಥೆಗಳಿಗೆ ಮಾದರಿಯಾಗಿದೆ ಎಂದರು. ಬಯಲು ಸೀಮೆಯ ಭಾಗದಲ್ಲಿ ಹೆಚ್ಚಾಗಿ ನಾವೆಲ್ಲರೂ ಗಿಡಗಳನ್ನು ನೆಡುವ ಮೂಲಕ ಅವುಗಳ ಪಾಲನೆ ಪೊಷಣೆ ಮಾಡಬೇಕಿರುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ರೈತ ಬಾಂಧವರು ಸಸಿಗಳನ್ನು ತಮ್ಮ ಜಮೀನುಗಳಲ್ಲಿ ಬೆಳೆಸಿ ಪರಿಸರ ಉಳಿಸಬೇಕೆಂದು ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿಯೂಥ್‌ಫೌಂಡೇಶನ್‌ವತಿಯಿಂದ ನೀಡುವ "ಆದರ್ಶ ಗ್ರಾಮಸ್ಥ" ಪ್ರಶಸ್ತಿಗೆ ಭಾಜನರಾದ ಗ್ರಾಮದ ಹಿರಿಯರಾದ ಮುರಳೀಧರ ದೇಶಪಾಂಡೆ ಅವರನ್ನು ಗಣ್ಯರು ಸನ್ಮಾನಿಸಿ ಗೌರವಿಸಿದರು.

ಪರಿಸರ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸಿ ಪ್ರಥಮ, ದ್ವಿತೀಯ ಮತ್ತು ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಗಣ್ಯರು ಬಹುಮಾನ ವಿತರಿಸಿದರು.

ಕಾರ್ಯಕ್ರಮದಲ್ಲಿ ಅರಣ್ಯಾಧಿಕಾರಿ ಶಿವಾಜಿ ಮುಂಜೆ ಸೇರಿದಂತೆ ಇಲಾಖೆಯ ಸಿಬ್ಬಂದಿಗಳು, ಮಾಜಿ ಜಿಲ್ಲಾ ಪಂಚಾಯತ್ ಸದಸ್ಯ ವಿನಾಯಕ ಬಾಗಡಿ, ಪಿಕೆಪಿಎಸ್ ಉಪಾಧ್ಯಕ್ಷ ಅಣ್ಣಾಸಾಹೇಬ ಮಿಸಾಳ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮೀನಾಕ್ಷಿ ದಳವಾಯಿ ಸೇರಿದಂತೆ ಮುಖಂಡರಾದ ಅಬ್ದುಲ್ ಮುಲ್ಲಾ, ಮಲ್ಲಿಕಾರ್ಜುನ ದಳವಾಯಿ, ಪೊಪಟ್ ನರೋಟೆ, ವಿಠ್ಠಲ ಗಸ್ತಿ, ಅಮೃತ ಮಿಸಾಳ ಹಾಗೂ ಕನ್ನಡ ಹಿರಿಯ ಪ್ರಾಥಮಿಕ ಶಾಲೆ, ಸಂಘಮಿತ್ರ ಪ್ರೌಢಶಾಲೆ ಮುಖ್ಯೋಪಾಧ್ಯಾಯರು ಹಾಗೂ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಸಿ.ಬಿ.ಎಸ್.ಸಿ ವಸತಿ ಶಾಲೆ, ಪದವಿ ಪೂರ್ವ ಕಾಲೇಜು ಲೋಕಾರ್ಪಣೆ | ಲಿಂಗದಹಳ್ಳಿಯಲ್ಲಿ ರೂ.25 ಕೋಟಿ ವೆಚ್ಚದ ಸುಸಜ್ಜಿತ ಕಟ್ಟಡ ನಿರ್ಮಾಣ: 560 ವಿದ್ಯಾರ್ಥಿಗಳಿಗೆ ಅನುಕೂಲ

# ತಾಲ್ಲೂಕಿನಲ್ಲಿ 3 ಸರ್ಕಾರಿ ಇಂಟರ್ ನ್ಯಾಷ್ನಲ್ ಮಾಡೆಲ್: ಶಾಲೆಗಳ ನಿರ್ಮಾಣಕ್ಕೆ ಕ್ರಮ: ಕೆ.ರಾಘವೇಂದ್ರ ಹಿಟ್ನಾಳ

**ಕೊಪ್ಪಳ :** ಹಿಟ್ನಾಳ, ಭಾಗ್ಯನಗರ ಮತ್ತು ಕೊಪ್ಪಳದ ಶಾಸಕರ ಮಾದರಿ ಶಾಲೆ ಸೇರಿ ತಾಲ್ಲೂಕಿನಲ್ಲಿ ಮೂರು ಕಡೆ ಪ್ರಾಥಮಿಕ, ಪ್ರೌಢ ಹಾಗೂ ಪಿಯು ಕಾಲೇಜು ಒಳಗೊಂಡಂತೆ ರೂ. 12 ಕೋಟಿ ರೂ ವೆಚ್ಚದಲ್ಲಿ ಸರ್ಕಾರಿ ಇಂಟರ್ ನ್ಯಾಷ್ನಲ್ ಮಾಡೆಲ್ ಶಾಲೆಗಳನ್ನು ನಿರ್ಮಾಣ ಮಾಡಲಾಗುವುದು ಎಂದು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಹೇಳಿದರು.

ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಕೊಪ್ಪಳ ತಾಲ್ಲೂಕಿನ ಲಿಂಗದಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ "ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಸಿ.ಬಿ.ಎಸ್.ಸಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜು" ಕಟ್ಟಡವನ್ನು ಜುಲೈ 03ರಂದು ರಿಬ್ಬನ್ ಕತ್ತರಿಸುವುದರ ಮೂಲಕ ಲೋಕಾರ್ಪಣೆಗೊಳಿಸಿ, ಬಳಿಕ ನಡೆದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಲಿಂಗದಹಳ್ಳಿಯಲ್ಲಿಂದು ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಸಿ.ಬಿ.ಎಸ್.ಸಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜು ಉದ್ಘಾಟನೆಯಾಗಿದ್ದು, ಸಂತಸ ಮತ್ತು ಹರ್ಷದ ವಿಚಾರವಾಗಿದೆ. ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು 2015-16ನೇ ಸಾಲಿನ ಬಜೆಟ್‌ನಲ್ಲಿ ಎರಡು ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆಗಳನ್ನು ಘೋಷಣೆ ಮಾಡಿದ್ದು, ಇದರಲ್ಲಿ ಒಂದು ಶಾಲೆಯನ್ನು ಕೊಪ್ಪಳ ಕ್ಷೇತ್ರಕ್ಕೆ ನೀಡುವಂತೆ ಮನವಿ ಮಾಡಿಕೊಳ್ಳಲಾಗಿತ್ತು. ಅದರಂತೆ ಈ ವಸತಿ ಶಾಲೆಯನ್ನು ಕೊಪ್ಪಳಕ್ಕೆ ಮಂಜೂರಿಸಿ, ಕಾಮಗಾರಿ ಪ್ರಾರಂಭಿಸಿ, ಸಿ.ಬಿ.ಎಸ್.ಸಿ ಪಠ್ಯಕ್ರಮದ 6 ರಿಂದ 12ನೇ ತರಗತಿವರೆಗೆ ಮಕ್ಕಳ ಶೈಕ್ಷಣಿಕ ಅನುಕೂಲಕ್ಕೆ ಸುಸಜ್ಜಿತವಾದ ಕಟ್ಟಡವನ್ನು ಇಂದು ಲೋಕಾರ್ಪಣೆಗೊಳಿಸಲಾಗಿದೆ. ಕೊಪ್ಪಳ ವಿಧಾನಸಭಾ ಕ್ಷೇತ್ರಕ್ಕೆ ಅನೇಕ ದೊಡ್ಡ-ದೊಡ್ಡ ಯೋಜನೆಗಳನ್ನು ತರುವಂತಹ ಕೆಲಸವಾಗಿದ್ದು, ಶೈಕ್ಷಣಿಕ ರಂಗದಲ್ಲಿ ಮೊರಾರ್ಜಿ ಶಾಲೆಗಳು, ಅಬ್ದುಲ್ ಕಲಾಂ ವಸತಿ ಶಾಲೆಗಳು ಹಾಗೂ ಇತರ ಹಾಸ್ಟೆಲ್‌ಗಳಿಗೆ ಈ ವರ್ಷ ರೂ. 60 ಕೋಟಿಗಳನ್ನು ಕೊಪ್ಪಳ ಕ್ಷೇತ್ರಕ್ಕೆ ತರುವಂತಹ ಕೆಲಸವಾಗಿದೆ. ಇದರಿಂದ ಕೇವಲ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಅಲ್ಲದೆ ಎಲ್ಲಾ ಜಾತಿಯ ಅರ್ಹ ವಿದ್ಯಾರ್ಥಿಗಳು ಶಿಕ್ಷಣ ಪಡೆಯಬಹುದಾಗಿದೆ ಎಂದು ಹೇಳಿದರು.

ಕೊಪಳದಲ್ಲಿ ವೈದ್ಯಕೀಯ ಕಾಲೇಜು ಅಷ್ಟೇ ಅಲ್ಲದೇ ರೂ. 192 ಕೋಟಿ ವೆಚ್ಚದಲ್ಲಿ 450 ಹಾಸಿಗೆಯ ಆಸ್ಪತ್ರೆಯ ಕಟ್ಟಡವನ್ನು ಕಟ್ಟುವಂತಹ ಕೆಲಸವಾಗಿದ್ದು, ಶೀಘ್ರ ಆಸ್ಪತ್ರೆ ಪ್ರಾರಂಭಕ್ಕೆ ಕ್ರಮ ಕೈಗೊಳ್ಳಲಾಗುತ್ತಿದೆ. ಕೊಪ್ಪಳಕ್ಕೆ ಮಲ್ಟಿ ಸ್ಪೇಷಾಲಿಟಿ ಆಸ್ಪತ್ರೆಯನ್ನು ಕೊಡಲೇಬೇಕೆಂದು ಮುಖ್ಯಮಂತ್ರಿಗಳ ಬಳಿ ಪ್ರಸ್ತಾವನೆ ಇಡಲಾಗಿದೆ. ಕೊಪ್ಪಳ ವಿಧಾನಸಭಾ ಕ್ಷೇತ್ರದ



104 ಗ್ರಾಮಗಳಲ್ಲಿ 24*7 ಶುದ್ಧ ಕುಡಿಯುವ ನೀರು ಒದಗಿಸಲು ರೂ. 245 ಕೋಟಿ ವೆಚ್ಚದಲ್ಲಿ ಕಾಮಗಾರಿ ಪ್ರಾರಂಭಿಸಲಾಗಿದ್ದು, ಭಾಗ್ಯನಗರ-ಕೊಪ್ಪಳಕ್ಕೆ ಕುಡಿಯುವ ನೀರಿಗಾಗಿ 145 ಕೋಟಿ ವೆಚ್ಚದಲ್ಲಿ ಕಾಮಗಾರಿ ಪ್ರಾರಂಭಿಸಲಾಗುತ್ತಿದೆ. ನೀರಾವರಿಗಾಗಿ ರೂ. 780ಕೋಟಿ ಅನುದಾನದಲ್ಲಿ ಕಾಮಗಾರಿಯನ್ನು ರೂಪಿಸಲಾಗುತ್ತಿದೆ. ಅಳವಂಡಿ-ಬೆಟಗೇರಿ ಹಾಗೂ ಬಹದ್ದೂರ್‌ಬಂಡಿ-ನವಕಲಬಂಡಿ ನೀರಾವರಿಗಾಗಿ ಈ ವರ್ಷದ ಬಜೆಟ್‌ನಲ್ಲಿ ಅನುದಾನ ನೀಡುವುದಾಗಿ ಮುಖ್ಯಮಂತ್ರಿಗಳು ತಿಳಿಸಿದ್ದಾರೆ. ಏತ ನೀರಾವರಿಯಿಂದಾಗಿ ಕೊಪ್ಪಳ ಕ್ಷೇತ್ರವು ನೀರಾವರಿಯಾಗಲಿದೆ. ಲಿಂಗದಹಳ್ಳಿ ಮತ್ತು ಬೆವಿನಹಳ್ಳಿ ಗ್ರಾಮಗಳಲ್ಲಿ ರಸ್ತೆ ಅಭಿವೃದ್ಧಿ ಸೇರಿದಂತೆ ಇತರ ಕಾರ್ಯಕ್ರಮಗಳಿಗಾಗಿ ಬೇಡಿಕೆ ಇಟ್ಟಿದ್ದು, ಈ ಬಗ್ಗೆ ಮುಂದಿನ ದಿನಮಾನಗಳಲ್ಲಿ ಸರ್ಕಾರದಿಂದ ಅನುದಾನವನ್ನು ತಂದು ಗ್ರಾಮಗಳ ಅಭಿವೃದ್ಧಿಗಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಮಾಜಿ ಸಂಸದರಾದ ಕರಡಿ ಸಂಗಣ್ಣ ಅವರು ಮಾತನಾಡಿ, ಲಿಂಗದಹಳ್ಳಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಸಿ.ಬಿ.ಎಸ್.ಸಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜು ಕಟ್ಟಡವು ಉತ್ತಮ ಗುಣಮಟ್ಟದಿಂದ ನಿರ್ಮಿಸಲಾಗಿದ್ದು, ಸಂತಸ ತಂದಿದೆ. ಈ ವಸತಿ ಶಾಲೆಯನ್ನು ಕೊಪ್ಪಳ ಕ್ಷೇತ್ರಕ್ಕೆ ತಂದಿರುವ ಶಾಸಕರ ಕಾರ್ಯವು ಶ್ಲಾಘನೀಯವಾಗಿದೆ. ಮಕ್ಕಳಿಗೆ ಬದುಕನ್ನು ಕಟ್ಟಿಕೊಳ್ಳಲು ಶಾಲೆಗಳು ಪೂರಕವಾಗಿವೆ. ವಸತಿ ಶಾಲೆಗಳು, ವಸತಿ ನಿಲಯಗಳು ಸೇರಿ ಕೊಪ್ಪಳ ಜಿಲ್ಲೆಗೆ ಹೊಸದಾಗಿ ಒಟ್ಟು 13 ಹೊಸ ವಸತಿ ಸಂಸ್ಥೆಗಳು ಮಂಜೂರಾಗಿದ್ದು, ಇದರಲ್ಲಿ ಕೊಪ್ಪಳ ಕ್ಷೇತ್ರಕ್ಕೆ 6 ಸಂಸ್ಥೆಗಳು ಮಂಜೂರಾಗಿರುವುದಕ್ಕೆ ಶಾಸಕರು ಶ್ರಮಿಸಿದ್ದಾರೆ. ತಾಂತ್ರಿಕ ಶಿಕ್ಷಣವು ಸಹ ಅತ್ಯಂತ ಮುಖ್ಯವಾಗಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಜಿ.ಟಿ.ಟಿ.ಸಿ ಕಾಲೇಜು ಕಲಬುರಗಿಯ ಜೊತೆಗೆ ಕೊಪ್ಪಳದಲ್ಲಿಯೂ ಇರುವುದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳಾದ ಸುರೇಶ ಕೊಕರೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಡಾ.ಎ.ಪಿ.ಜೆ ಅಬ್ದುಲ್ ಕಲಾಂ ಸಿ.ಬಿ.ಎಸ್.ಸಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜು ಕಟ್ಟಡವನ್ನು ರೂ. 25 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದ್ದು, ಪ್ರಸ್ತುತ ವಿದ್ಯಾರ್ಥಿಗಳ ಹಾಜರಾತಿ ಸಂಖ್ಯೆ 560 ಆಗಿದೆ. ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಅಲ್ಪಸಂಖ್ಯಾತರಿಗಾಗಿ ಸಾಕಷ್ಟು ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ. ಮುಖ್ಯವಾಗಿ ಶೈಕ್ಷಣಿಕ ಹಾಗೂ ಸಮುದಾಯ ಕಾರ್ಯಕ್ರಮಗಳು, ವಿದ್ಯಾರ್ಥಿ ವೇತನದಂತಹ ಕಾರ್ಯಕ್ರಮಗಳನ್ನು ಜಾರಿಗೆ ತರಲಾಗುತ್ತಿದೆ. ಜಿಲ್ಲೆಯಲ್ಲಿ 7 ಮೌಲಾನ ಆಜಾದ್ ಮಾದಿರಿ ಶಾಲೆಗಳು, 9 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮತ್ತು 10 ಕಾಲೇಜುಗಳು ಹಾಗೂ ಹಾಸ್ಟೆಲ್‌ಗಳಿವೆ. ವಸತಿ ಶಾಲೆ ಸೇರಿದಂತೆ ಈ ವರ್ಷ ಜಿಲ್ಲೆಗೆ 13 ಹೊಸ ಶಿಕ್ಷಣ ಸಂಸ್ಥೆಗಳು ಮಂಜೂರಾಗಿದ್ದು, ಕೊಪ್ಪಳ ತಾಲ್ಲೂಕಿಗೆ ಒಂದು ಮೊರಾರ್ಜಿ ದೇಸಾಯಿ ವಸತಿ ಶಾಲೆ, 3 ಹಾಸ್ಟೆಲ್‌ಗಳು, 2 ಮೌಲಾನಾ ಆಜಾದ್ ಮಾದರಿ ಶಾಲೆಗಳನ್ನು ಮಂಜೂರು ಮಾಡಲಾಗಿದೆ. ಅಲ್ಪಸಂಖ್ಯಾತರ ಶ್ರೇಯೋಭಿವೃದ್ಧಿಗಾಗಿ ಸರ್ಕಾರವು ಸಾಕಷ್ಟು ಯೋಜನೆಗಳನ್ನು ಜಾರಿಗೆ ತಂದಿದ್ದು, ಸಮುದಾಯದವರು ಈ ಎಲ್ಲಾ ಯೋಜನೆಗಳ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಕಾರ್ಯಕ್ರಮದಲ್ಲಿ ಕೊಪ್ಪಳ ತಾಲ್ಲೂಕ ಗ್ಯಾರೆಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಬಾಲಚಂದ್ರನ್, ಬೆವಿನಾಳ ಗ್ರಾಮ ಪಂಚಾಯತ್ ಅಧ್ಯಕ್ಷರಾದ ತಿಪ್ಪವ್ವ ಶಿವಪ್ಪ ನಾಯಕ, ಉಪಾಧ್ಯಕ್ಷರಾದ ಮುರಳಿ ಬಿಸರಳ್ಳಿ, ಸದಸ್ಯರಾದ ಅಂಜನಪ್ಪ ಲಿಂಗದಹಳ್ಳಿ, ಕೊಪ್ಪಳ ತಹಶೀಲ್ದಾರರಾದ ವಿಠ್ಠಲ್ ಚೌಗಲಾ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ದುಂಡಪ್ಪ ತುರಾತಿ, ಮಾಜಿ ಜಿಪಂ ಅಧ್ಯಕ್ಷರಾದ ಎಸ್.ಬಿ.ನಾಗರಳ್ಳಿ ಹಾಗೂ ಟಿ.ಜನಾರ್ಧನ ಹುಲಿಗಿ ಸೇರಿದಂತೆ ಹಲವು ಗಣ್ಯರು, ಜನಪ್ರತಿನಿಧಿಗಳು, ಉಪಸ್ಥಿತರಿದ್ದರು. ಉಪನ್ಯಾಸಕರಾದ ನಾಗಭೂಷಣ ಅವರು ಕಾರ್ಯಕ್ರಮ ನಿರೂಪಿಸಿದರು. ಪ್ರಾಂಶುಪಾಲರಾದ ದೊಡ್ಡಬಸಪ್ಪ ವಾಲ್ಮೀಕಿ ಅವರು ಸ್ವಾಗತಿಸಿದರೆ, ಬಾಲರಾಜ ಮುಗಳಕರ್ ಅವರು ವಂದಿಸಿದರು.

## ಕೊಪ್ಪಳ ತಾಲೂಕ ಗ್ಯಾರಂಟಿ ಕಮಿಟಿ ಕಾರ್ಯಾಲಯ ಆರಂಭ

# ಜನರಿಗೆ ಗ್ಯಾರಂಟಿ ಯೋಜನೆ ಸರಿಯಾಗಿ ತಲುಪಲಿ: ಕೆ.ರಾಘವೇಂದ್ರ ಹಿಟ್ನಾಳ



**ಕೊಪ್ಪಳ :** ರಾಜ್ಯ ಸರಕಾರ ಬಡವರಿಗೆ ಆರಂಭಿಸಿರುವ ಐದು ಗ್ಯಾರಂಟಿ ಯೋಜನೆಗಳನ್ನು ನಿಲ್ಲಿಸುವದಿಲ್ಲ, ಜನರಿಗೆ ಯೋಜನೆಗಳು ಇನ್ನಷ್ಟು ಪರಿಣಾಮಕಾರಿಯಾಗಿ ತಲುಪಲು ಅಧಿಕರಿಗಳು ಮತ್ತು ಸಮಿತಿಯವರು ಶ್ರಮಿಸಬೇಕು ಎಂದು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ಹೇಳಿದರು.

ನಗರದ ತಾಲ್ಲೂಕ ಪಂಚಾಯತಿಯಲ್ಲಿ ಸರಕಾರದ ನಿರ್ದೇಶನದ ಮೇರೆಗೆ ಕೊಪ್ಪಳ ತಾಲ್ಲೂಕ ಗ್ಯಾರಂಟಿ ಅನುಷ್ಠಾನ ಸಮಿತಿಯ ಕಾರ್ಯಾಲಯವನ್ನು ಪ್ರಾರಂಭಿಸಿ, ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ರಾಜ್ಯ ಸರಕಾರದ ಸಮಾಜಮುಖಿ ಯೋಜನೆಯಾದ ಗ್ಯಾರಂಟಿ ಸ್ಕೀಂಗಳ ಸಮರ್ಪಕ ಅನುಷ್ಠಾನಕ್ಕೆ ಸರಕಾರೇತರ ಸಮಿತಿ ರಚನೆ ಮಾಡಿದ್ದು, ಮೂರು ಹಂತದ ಸಮಿತಿಯನ್ನು ರಚಿಸಲಾಗಿದೆ. 98% ಜನರಿಗೆ ಸೌಲಭ್ಯ ಸಿಕ್ಕಿದ್ದು, ಕೆಲವರಿಗೆ ತಾಂತ್ರಿಕ ಕಾರಣಗಳಿಂದ ಸೌಲಭ್ಯ ಬಂದಿಲ್ಲ. ತಾಂತ್ರಿಕ ಸಮಸ್ಯೆಗಳನ್ನು ಶೀಘ್ರ ಸರಿ ಮಾಡಲಾಗುವದು ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಗ್ಯಾರಂಟಿ ಯೋಜನೆಗಳು ಐದು ವರ್ಷ ಪಕ್ಕಾ ಗ್ಯಾರಂಟಿ ಇರುತ್ತವೆ, ಸಾಮಾಜಿಕ ಜಾಲತಾಣಗಳಲ್ಲಿನ ಸುಳ್ಳನ್ನು ಸಹ ನಂಬಬೇಡಿ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್ ಸ್ಯಾಮುವೇಲ್, ಸದಸ್ಯ ಕಾರ್ಯದರ್ಶಿಗಳಾದ ದುಂಡಪ್ಪ ತುರಾದಿ, ಸದಸ್ಯರುಗಳಾದ ಜ್ಯೋತಿ ಮಂಜುನಾಥ ಗೊಂಡಬಾಳ, ದೇವರಾಜ ನಡುವಿನಮನಿ, ರಾಮಣ್ಣ ಚೌಡ್ಕಿ ಹಟ್ಟಿ, ಪರಶುರಾಮ ಕೊರವರ, ಅಶೋಕ ಗೋರಂಟ್ಲಿ, ಆನಂದಪ್ಪ ಕಿನ್ನಾಳ, ಲಕ್ಷ್ಮಣ ಡೊಳ್ಳಿನ್ ಮತ್ತು ಮಾನವಿ ಪಾಶಾ, ರಮೇಶ ಹ್ಯಾಟಿ ಭಾಗ್ಯನಗರ, ತಹಶೀಲ್ದಾರರಾದ ವಿಠ್ಠಲ ಚೌಗಲಾ, ಸಿಡಿಪಿಓ ಜಯಶ್ರೀ, ಕೆಇಬಿ ಎಇಇ ಸಲೀಂ, ಕೆಇಬಿ ಮುನಿರಾಬಾದಿನ ಸಂತೋಷ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

### ಮುಗಳೊಳ್ಳಿಯಲ್ಲಿ ಶ್ರೀ ಕುಮಾರೇಶ್ವರ ಆಸ್ಪತ್ರೆಯಿಂದ

## ಉಚಿತ ಆರೋಗ್ಯ ತಪಾಸಣೆ ಶಿಬಿರ

**ಬಾಗಲಕೋಟೆ :** ನಗರದ ಬಿವಿವಿ ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಯ ತಜ್ಞವೈದ್ಯರಿಂದ ಮುಗಳೊಳ್ಳಿ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣೆ ಶಿಬಿರ ಆಯೋಜಿಸಲಾಗಿತ್ತು.

ಕರ್ನಾಟಕ ಪಬ್ಲಿಕ್ ಶಾಲೆ ಮುಗಳೊಳ್ಳಿ ಇವರ ಸಹಯೋಗದಲ್ಲಿ ಪಬ್ಲಿಕ್‌ಸ್ಕೂಲ್‌ನ ಸಭಾಂಗಣದಲ್ಲಿ ಶಿಬಿರವನ್ನು ನಡೆಸಲಾಯಿತು. ಶ್ರೀ ಕುಮಾರೇಶ್ವರ ಆಸ್ಪತ್ರೆಯ ಎಂಟು ವಿಭಾಗಗಳ ತಜ್ಞವೈದ್ಯರಿಂದ ಸುಮಾರು 80ಕ್ಕೂ ಅಧಿಕ ರೋಗಿಗಳಿಗೆ ಉಚಿತ ತಪಾಸಣೆ ಮಾಡಿ ಔಷಧ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಮುಗಳೊಳ್ಳಿ ಗ್ರಾಮದ ಪ್ರಮುಖರುಗಳಾದ ಶ್ರೀ ಸಂಗಣ್ಣ ಕಲಾದಗಿ, ಶ್ರೀ.ಈರಪ್ಪ ಕಲಾದಗಿ, ಶ್ರೀ ಕಾಳಪ್ಪ ತಳವಾರ, ಶ್ರೀ.ಸಿದ್ದಪ್ಪ ಸುನಗದ, ಶ್ರೀ.ಶೇಖರಪ್ಪ ಮಿಕ್ಕಲ್, ಶ್ರೀ.ಬಮ್ಮಣ್ಣ ತಳವಾರ, ಶ್ರೀ.ಶಿವಪ್ಪ ಬಜಣ್ಣವರ, ಶ್ರೀ.ಭೀಮಣ್ಣ ಬಜಣ್ಣವರ, ಶ್ರೀ.ಪಾಂಡಪ್ಪ ಬಳಣ್ಣವರ, ಹಾಗೂ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರಾಚಾರ್ಯರಾದ ಕೆ.ಎಸ್.ದೇಸಾಯಿ ಮತ್ತು ಸಿಬ್ಬಂದಿಯವರು, ಮುಗಳೊಳ್ಳಿ ಗ್ರಾಮದ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ವೈದ್ಯರ ಸಮರ್ಪಣಾ ಸೇವೆ ಬೆಲೆ ಕಟ್ಟಲಾಗದು: ಡಾ. ಶರಣ ಮಳಖೇಡ್ಕರ್

**ವಿಜಯಪುರ :** ವೈದ್ಯರ ಸಮರ್ಪಣಾ ಸೇವೆ ಬೆಲೆ ಕಟ್ಟಲಾಗದು ಎಂದು ಜೆಎಸ್‌ಎಸ್ ಆಸ್ಪತ್ರೆಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಡಾ.ಶರಣ ಮಳಖೇಡ್ಕರ ತಿಳಿಸಿದರು.

ನಗರದ ಜ್ಞಾನಯೋಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ವತಿಯಿಂದ ರಾಷ್ಟ್ರೀಯ ವೈದ್ಯರ ದಿನದ ಅಂಗವಾಗಿ ಆಯೋಜಿಸಲಾಗಿದ್ದ ಆರೋಗ್ಯ ತಪಾಸಣಾ ಉಚಿತ ಶಿಬಿರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಲ್ಲ ವೃತ್ತಿಗಳಿಗಿಂತ ವೈದ್ಯ ವೃತ್ತಿಯು ಅತ್ಯಂತ ಶ್ರೇಷ್ಠವಾಗಿದೆ. ಸಾವಿನ ಮನೆ ಬಾಗಿಲು ತಟ್ಟುವ ವ್ಯಕ್ತಿಗೆ ಭರವಸೆಯ ಚಿಕಿತ್ಸೆ ನೀಡುವ ಮೂಲಕ ಬದುಕಿನ ಅಂಗಳಕ್ಕೆ ತಂದು ಬಿಡುವ ಅದ್ಭುತವಾದ ಚಮತ್ಕಾರವನ್ನು ವೈದ್ಯರು ಮಾಡುತ್ತಾರೆ. ಹೀಗಾಗಿಯೇ ವೈದ್ಯರನ್ನು ನಾರಾಯಣನ ಸ್ವರೂಪ ಎಂದು ಭಾವಿಸುತ್ತಾರೆ. ನಮ್ಮ ಆಸ್ಪತ್ರೆಯ ವೈದ್ಯರಲ್ಲಿ ಆತ್ಮ ಸಮರ್ಪಣಾ ಭಾವದಿಂದ ಸೇವೆ ಸಲ್ಲಿಸುತ್ತಿರುವುದು ರೋಗಿಗಳಲ್ಲಿ ಅರ್ಧ ರೋಗ ವಾಸಿಯಾಗುವುದಕ್ಕೆ ಕಾರಣವಾಗಿದೆ ಎಂದು ಹೇಳಿದರು.



ಖ್ಯಾತ ನ್ಯೂರೋ ಸರ್ಜನ್ ಡಾ. ಮಯೂರ ಕಾಕು ಅವರು ಮಾತನಾಡಿ, ಯೋಗ ರೋಗವನ್ನು ವಾಸಿ ಮಾಡುವುದರ ಜೊತೆಗೆ ರೋಗವನ್ನು ತಡೆಯುವ ಕೆಲಸ ಮಾಡುತ್ತದೆ. ವ್ಯಕ್ತಿಯು ಸದಾ ಆರೋಗ್ಯವಂತನಾಗಿರುವಂತೆ ನೋಡಿಕೊಳ್ಳುತ್ತದೆ. ಯೋಗವನ್ನು ಚಿಕಿತ್ಸಾ ವಿಧಾನದಲ್ಲಿ ಅಳವಡಿಕೆ ಮಾಡುವ ಮೂಲಕ ಶಸ್ತ್ರಚಿಕಿತ್ಸೆಗಳಿಗೆ ವೆಚ್ಚವಾಗುವ ಸುಮಾರು 75 ಕೋಟಿ ರೂಪಾಯಿಗಳನ್ನು ಉಳಿಸಿ ರೋಗಿಗಳ ಆರ್ಥಿಕ ಹೊರೆಯನ್ನು ತಗ್ಗಿಸಿದ ಸಂತೃಪ್ತಿ ನನಗಿದೆ. ಇಷ್ಟು ದಿನ ಬೆಂಗಳೂರಿನ ಜನಗಳಿಗೆ ಮಾತ್ರ ಸೀಮಿತವಾಗಿ ಉಳಿಯುತ್ತಿದ್ದ ನನ್ನ ಚಿಕಿತ್ಸೆ ಇನ್ನು ಮುಂದೆ ವಿಜಯಪುರ ಹಾಗೂ ಸುತ್ತ ಮುತ್ತಲಿನ ಜಿಲ್ಲೆಗಳ ಜನಗಳಿಗೆ ತಲುಪಿಸುವ ಮಹದುದ್ದೇಶದಿಂದ ವಿಜಯಪುರ ಜೆಎಸ್‌ಎಸ್ ಆಸ್ಪತ್ರೆಗೆ ಆಗಮಿಸುತ್ತಿದ್ದೇನೆ. ಸದಾ ನಿಮ್ಮ ಸೇವೆಯಲ್ಲಿ ತೊಡಗಿರುವ ಜೆಎಸ್‌ಎಸ್‌ನಲ್ಲಿ ನಾನು ಸದಾ ನಿಮ್ಮ ಸೇವೆ ಮಾಡಲು ಬಯಸುತ್ತೇನೆ ಎಂದು ಹೇಳಿದರು.

ಪತ್ರಕರ್ತ ಕೆ.ಎನ್. ರಮೇಶ ಪ್ರತಿ ದಿನ ರೋಗಿಗಳ ನೆರವಿಗೆ ನಿಲ್ಲುವ ಎಲ್ಲ ವೈದ್ಯರನ್ನು ಸನ್ಮಾನಿಸಿ ಮಾತನಾಡಿದ ಅವರು, ಜೆಎಸ್‌ಎಸ್ ಹಾಸ್ಪಿಟಲ್ಸ್ ನಡೆದು ಬಂದ ಹಾದಿ ಹಾಗೂ ಜನರಿಗೆ ನೀಡುತ್ತಿರುವ ಸೇವೆಯ ಜೊತೆಗೆ ಪೂಜ್ಯರ ಹೆಸರಿನಡಿಯಲ್ಲಿ ಜನ ಸಾಮಾನ್ಯರಿಗೆ ಆಸ್ಪತ್ರೆ ಮಾಡುತ್ತಿರುವ ಸಹಾಯದ ಕುರಿತು ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ ಡಾ.ಸೌಮ್ಯಶ್ರೀ ಮಯೂರ ಕಾಕು, ಡಾ. ವೀಣಾ ಪಾಟೀಲ, ಡಾ. ಬಲವಂತಾರಾಯ ಮಸಳಿ, ಡಾ. ದೀಪಕ ಕಡ್ಲಿ, ಡಾ. ಶಿರೀಶ ಕನ್ನೂರ, ಡಾ. ಮಹಾಬಲೇಶ್ವರ ಬಡಿಗೇರ, ಡಾ. ವಿಕಾಸ ಸೊನಗೆ, ಡಾ. ಜ್ಞಾನೇಶ್ವರಿ ಸೇರಿದಂತೆ ಎಲ್ಲ ವೈದ್ಯರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು. ಉಚಿತ ಆರೋಗ್ಯ ತಪಾಸಣಾ ಶಿಬಿರದಲ್ಲಿ 500 ಕ್ಕೂ ಅಧಿಕ ಜನರು ಭಾಗವಹಿಸಿ ಚಿಕಿತ್ಸೆ ಪಡೆದು-ಕೊಂಡರು.

# ಸೇವಾ ನಿವೃತ್ತಿ ಸನ್ಮಾನ ಬೀಳ್ಕೋಡುಗೆ



**ಕೊಲ್ಹಾರ :** ಪಟ್ಟಣದ ಪಟ್ಟಣ ಪಂಚಾಯತ ಕಾರ್ಯಾಲಯದ ಕರ ವಸೂಲಿಗಾರರಾಗಿ ಕರ್ತವ್ಯ ನಿರ್ವಹಿಸಿ ಸೇವ ನಿವೃತ್ತಿ ಹೊಂದಿದ ಪ್ರಯುಕ್ತ ಸಿದ್ದಪ್ಪ ಮುರನಾಳ ಇವರನ್ನು ಸನ್ಮಾನಿಸಿ ಬೀಳ್ಕೋಡಲಾಯಿತು.

ಪ.ಪಂ ಕಾರ್ಯಾಲಯದಲ್ಲಿ ಪಟ್ಟಣದ ಪ್ರಮುಖರು, ಪ ಪಂ ಸದಸ್ಯರು ಹಾಗೂ ಸಿಬ್ಬಂದಿಗಳು ಸನ್ಮಾನಿಸಿ ಬೀಳ್ಕೋಟ್ಟರು.

ಈ ಸಂದರ್ಭದಲ್ಲಿ ಪ.ಪಂ ಮುಖ್ಯಾಧಿಕಾರಿ ಉಮೇಶ ಚಲವಾದಿ, ಪಟ್ಟಣದ ಪ್ರಮುಖರಾದ ವಿನೀತಕುಮಾರ ದೇಸಾಯಿ, ರಾಜಶೇಖರ ಶೀಲವಂತ, ಮಹೇಶ ಗಿಡ್ಡಪ್ಪಗೋಳ, ವಿರುಪಾಕ್ಷಿ ಕೋಲಕಾರ, ಎಂ.ಆರ್ ಕಲಾದಗಿ, ಡೋಂಗ್ರಿ ಕಟಬರ, ಬಸಪ್ಪ ಕಟಬರ, ಪ.ಪಂ ಸದಸ್ಯರಾದ ಸಿ.ಎಸ್ ಗಿಡ್ಡಪ್ಪಗೋಳ, ತೌಸಿಫ್ ಗಿರಗಾಂವಿ, ಅಪ್ಪಾಸಿ ಮಟ್ಟಿಹಾಳ, ಮಹಾಂತೇಶ ಗಿಡ್ಡಪ್ಪಗೋಳ, ನಿಂಗು ಗಣಿ, ಬಾಬು ಬಜಂತ್ರಿ, ದಸ್ತಗೀರ ಕಲಾದಗಿ, ಶ್ರೀಶೈಲ ಅಥಣಿ ಹಾಗೂ ಇನ್ನಿತರರು ಇದ್ದರು.

# ವೈದ್ಯರು ವಿಶ್ವ ಭಾವೈಕ್ಯತೆಯ ಪ್ರತೀಕ: ಸಂತೋಷ ಬಂಡೆ



**ವಿಜಯಪುರ :** ನಂಬಿ ಬಂದ ರೋಗಿಗಳನ್ನು ಆರೈಕೆ ಮಾಡುವ ವೈದ್ಯರು ವಿಶ್ವ ಭಾವೈಕ್ಯತೆಯ ಪ್ರತೀಕ. ನಮ್ಮೆಲ್ಲರ ಆರೋಗ್ಯವನ್ನು ಸುಸ್ಥಿರವಾಗಿರಿಸಿ, ಸುಂದರ ಆರೋಗ್ಯಪೂರ್ಣ ಸಮಾಜದ ನಿರ್ಮಾತೃಗಳೇ ವೈದ್ಯರು ಎಂದು ಶಿಕ್ಷಕ ಸಾಹಿತಿ ಸಂತೋಷ ಬಂಡೆ ಹೇಳಿದರು.

ತಾಲೂಕಿನ ನಾಗಠಾಣ ಗ್ರಾಮದಲ್ಲಿ ಸೋಮವಾರ ಸಂಜೆ ರಾಷ್ಟ್ರೀಯ ವೈದ್ಯರ ದಿನದ ಪ್ರಯುಕ್ತ ವೈದ್ಯ ಡಾ.ಮೋಹನ ಎಂ ಭೋಸಲೆ ಅವರ ಸನ್ಮಾನ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಓರ್ವ ಆದರ್ಶ ವೆ?ದ್ಯ ತನ್ನ ಕುಟುಂಬದ ನೋವು ನಲಿವುಗಳನ್ನು ಬದಿಗಿರಿಸಿ ರೋಗಿಯನ್ನು ಗುಣಪಡಿಸುವ ರೀತಿ ನಿಜಕ್ಕೂ ಅತ್ಯುದ್ಭುತ. ಪ್ರಿ?ತಿ ತುಂಬಿದ ಮಾತುಗಳಿಂದ ರೋಗಿಗಳಲ್ಲಿ ಆಪ್ತ ಸಂಜೀವಿನಿಯಂತೆ, ಸ್ನೇ?ಹಿತನಂತೆ ಕಂಡು ಬರುವ ಡಾ.ಭೋಸಲೆ ಅವರ ಗ್ರಾಮೀಣ ಸೇವೆ ಅನುಪಮವಾದುದು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಇಂಡಿ ಐಟಿಐ ಕಾಲೇಜಿನ ಪ್ರಾಚಾರ್ಯ ಪರಶುರಾಮ ರಜನಿಕರ ಮಾತನಾಡಿ, ವೈದ್ಯರು ನಮ್ಮ ಎರಡನೇ ತಂದೆ ತಾಯಿಗಳು ಇದ್ದಂತೆ. ಡಾ.ಭೋಸಲೆ ಅವರು ನಾಗಠಾಣದಲ್ಲಿಯೇ 50 ವರ್ಷದ ಸೇವೆ ಪೂರೈಸಿದ್ದು ಅವಿಸ್ಮರಣೀಯ ಎಂದು ಹೇಳಿದರು.

ಮುಂಬೈ ನಗರದ ಗಿರೀಶ ಸಾರವಾಡ ಮಾತನಾಡಿ, ತಮ್ಮ ಬಂಧು ಬಳಗದ ಪ್ರಿ?ತಿಯ ಪರಿಸರವನ್ನು ಮರೆತು ಸೇವೆಗೈಯುವ ಡಾ.ಭೋಸಲೆ ಅವರ ಕ್ರಿಯಾಶೀಲತೆಯ ಕಾಯಕ ನಮ್ಮಲ್ಲಿ ಅಭಿಮಾನ ಮೂಡಿಸುತ್ತದೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಡಾ.ಬೋಸಲೆ, ವೈದ್ಯ ಲೋಕ ಮಹಾಪರ್ವತ ಇದ್ದಂತೆ. ವೈದ್ಯಕೀಯ ಸೇವೆ ಎಲ್ಲ ಸೇವೆಗಳಿಗಿಂತ ಅನನ್ಯವಾಗಿದ್ದು, ರೋಗಿಗಳ ಆರೋಗ್ಯ ಕಾಳಜಿಯಲ್ಲಿ ತೊಡಗಿರುವದು ನನ್ನ ಪಾಲಿಗೆ ಪುಣ್ಯದ ಕೆಲಸ. ಗ್ರಾಮೀಣ ಜನತೆಗೆ ಅತ್ಯುತ್ತಮ ವೈದ್ಯಕೀಯ ಸೇವೆ ನೀಡುವ ಕಾರ್ಯ ಸದಾ ಮುನ್ನಡೆಸುವೆ ಎಂದು ಹೇಳಿದರು.

ಡಿಸಿಸಿ ಬ್ಯಾಂಕ್ ಮ್ಯಾನೇಜರ್ ಸಾಯಬಣ್ಣ ಗೌಡೆನ್ನವರ, ಗ್ರಾಮಸ್ಥರಾದ ಚನಮಲ್ಲಪ್ಪ ಸಮಗೊಂಡ, ರಾಮನಿಂಗ ಸಮಗೊಂಡ, ಸುಭಾಸ ಬಂಡೆ, ಸಂತೋಷ ಹಳ್ಳಿ, ರಾಮಗೊಂಡ ಕತ್ನಳ್ಳಿ, ಸಿದ್ದು ಕತ್ನಳ್ಳಿ, ಮೇಲಪ್ಪ ಬಗಲಿ, ಶ್ರೀಶೈಲ ರಾಂಪೂರ, ಸುರೇಶ ಕತ್ನಳ್ಳಿ, ಹನಮಂತರಾಯ ಸಮಗೊಂಡ, ಉಮೇಶ ಕತ್ನಳ್ಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಕಲುಷಿತ ನೀರು ಪೂರೈಕೆಯಾಗದಂತೆ ಕ್ರಮ ಕೈಕೊಳ್ಳಿ

**ಇಂಡಿ :** ಗ್ರಾಮೀಣ ಪ್ರದೇಶದಲ್ಲಿ ಕಲುಷಿತ ನೀರು ಸೇವನೆಯಿಂದ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಪ್ರಮಾಣಗಳು ಕಂಡು ಬಂದಿದ್ದು ಇಂತಹ ಪ್ರಕರಣಗಳು ಪುನರಾವರ್ತನೆಯಾಗದಂತೆ ಮುನ್ನಚ್ಚರಿಕೆ ವಹಿಸಬೇಕು ಎಂದು ಎಇಇ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಎಸ್.ಆರ್.ರುದ್ರವಾಡಿ ಹೇಳಿದರು.

ಪಟ್ಟಣದ ತಾ.ಪಂ ಸಭಾಭವನದಲ್ಲಿ ತಾ.ಪಂ ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಯೋಗದಲ್ಲಿ ಆಯೋಜಿಸಿದ ನೀರಿನ ಗುಣಮಟ್ಟ ಪರೀಕ್ಷೆ ಸಂಬಂಧ ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಲುಷಿತ ನೀರು ಎಂದು ಕಂಡು ಬಂದಿರುವ ನೀರಿನ ಮೂಲಗಳಿಂದ ಕುಡಿಯಲು ನೀರನ್ನು ಸರಬರಾಜು ಮಾಡದೇ ಅಂತಹ ಮೂಲಗಳ ಹತ್ತಿರ ಈ ನೀರು ಕುಡಿಯಲು ಯೋಗ್ಯವಾಗಿಲ್ಲ ಎಂಬ ನಾಮಫಲಕವನ್ನು ಅಳವಡಿಸಿ ಇಂತಹ ನೀರಿನ ಮೂಲಗಳ ವಿವರಗಳನ್ನು ಹಾಗೂ ಪರೀಕ್ಷಿಸುವ



ಎಲ್ಲ ನೀರಿನ ಮೂಲಗಳ ಪರೀಕ್ಷಾ ವರದಿಗಳನ್ನು ಜಲಜೀವನ ಮಿಷನ್ ಡಬ್ಲ್ಯೂಕ್ಯೂಎಂಐಎಸ್ ನಲ್ಲಿ ಟ್ಯಾಗಿಂಗ ಮಾಡಲು ಸೂಚಿಸಿದರು.

ತಾ.ಪಂ ಸಹಾಯಕ ನಿರ್ದೇಶಕ ಪ್ರಕಾಶ ರಾಠೋಡ ಮಾತನಾಡಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಜನರಿಗೆ ಸುರಕ್ಷಿತ ಕುಡಿಯುವ ನೀರು ಒದಗಿಸುವದು ಮತ್ತು ಉತ್ತಮ ನೈರ್ಮಲ್ಯವನ್ನು ಕಾಪಾಡಿಕೊಳ್ಳಲು ಹಾಗೂ ನೀರಿನ ಪರೀಕ್ಷೆಯನ್ನು ಸ್ಥಳದಲ್ಲೇ ಪರೀಕ್ಷಿಸಲು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಆಯುಕ್ತರ ನಿರ್ದೇಶಕರ ಮೇರೆಗೆ ಜೂನ 27 ರಿಂದ ಜು. 2 ರ ವರೆಗೆ ಕೈ ಕೊಳ್ಳಲಾಗಿದೆ ಎಂದರು.

ಇದೇ ವೇಳೆ ಗ್ರಾಮೀಣ ಪ್ರದೇಶದಲ್ಲಿ ಕಲುಷಿತ ನೀರಿನಂದಾಗುವ ದುಷ್ಪರಿಣಾಮಗಳ ಬಗ್ಗೆ ಜನರಲ್ಲಿ ಜಾಗೃತಿಯನ್ನು ಮೂಡಿಸುವ ಸಲುವಾಗಿ ಪೋಸ್ಟರ್ ವಿತರಿಸಿದರು.

ನಂದೀಪ ರಾಠೋಡ ಮಾತನಾಡಿದರು. ಕಾರ್ಯಕ್ರಮದಲ್ಲಿ ಪಿಡಿಓಗಳಾದ ಜಬ್ಬಾರ ಹಿಳ್ಳಿ, ಸಿದರಾಯ ಬಿರಾದಾರ, ವಿರೇಶ ಹಿಟ್ಟಿನಹಳ್ಳಿ, ಸುರೇಶ ಲೋಣಿ ಮತ್ತಿತರಿದ್ದರು.

# ಸಾಧನೆ ಸಾಧಕನ ಸೊತ್ತು, ಹೊರತು ಸೋಮಾರಿಯದಲ್ಲ: ಡಾ. ಪೂರ್ಣಿಮಾ ಜಿ.



**ರಬಕವಿ–ಬನಹಟ್ಟಿ :** ಬದುಕಿನಲ್ಲಿ ಒದಗಿ ಬಂದ ಅದೃಷ್ಟದ ಬಾಗಿಲನ್ನು ನಾವು ತೆರೆಯಲು ಪ್ರಯತ್ನಿಸಬೇಕು. ಇಲ್ಲದಿದ್ದರೆ ನಿಮ್ಮ ಕನಸುಗಳು ಕನಸಾಗಿಯೇ ಉಳಿಯುತ್ತವೆ. ಕಷ್ಟಗಳ ಮಧ್ಯೆ ಬದುಕುವದನ್ನು ಕಲಿತರೆ ಸಂತೋಷದ ಕ್ಷಣಗಳು ನಮ್ಮನ್ನು ಹುಡುಕಿಕೊಂಡು ಬರುತ್ತವೆ. ಸಾಧನೆ ಸಾಧಕನ ಸೊತ್ತು , ಹೊರತು ಸೋಮಾರಿಯದಲ್ಲ ಎಂದು ಬೀದರಿನ ಜ್ಞಾನಸುಧಾ ಶಿಕ್ಷಣ ಸಂಸ್ಥೆಯ ಸಂಸ್ಥಾಪಕಿ ಡಾ. ಪೂರ್ಣಿಮಾ ಹೇಳಿದರು.

ಕೊಣ್ಣೂರ ವಿಜ್ಞಾನ ಮತ್ತು ವಾಣಿಜ್ಯ ಪದವಿ ಪೂರ್ವ ಮಹಾವಿದ್ಯಾಲಯದ 'ಪ್ರೇಶಸ9 ಡೇ – 2024' ಸಾಂಸ್ಕೃತಿಕ ಮತ್ತು ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.


ಮಾತೃಭಾಷೆಯನ್ನು ಚೆನ್ನಾಗಿ ಕಲಿತವನು ಉಳಿದ ಎಲ್ಲ ಭಾಷೆಯನ್ನು ಚೆನ್ನಾಗಿ ಕಲಿಯುವನು. ವಿದ್ಯಾರ್ಥಿಗಳು ಪ್ರಾಮಾಣಿಕತೆಯನ್ನು ಬೆಳೆಸಿಕೊಳ್ಳಿ, ಪ್ರಾಮಾಣಿಕತೆ ನಿಮಗೆ ಅರಿವಿಲ್ಲದೆ ನಿಮ್ಮ ಗೌರವವನ್ನು ಹೆಚ್ಚಿಸುತ್ತೆ. ಒಳ್ಳೆಯದನ್ನು ಮಾಡಿ. ಒಳ್ಳೆಯತನ ಎಲ್ಲ ಕಾಲಕ್ಕೂ ಸಲ್ಲುವಂತಹದು ಎಂದು ಹಿರಿಯ ಸಾಹಿತಿ ಸಿದ್ಧರಾಜ ಪೂಜಾರಿ ಹೇಳಿದರು.

ಪರಿಶ್ರಮ ಮತ್ತು ನಿರಂತರ ಅಭ್ಯಾಸ ನಿಮ್ಮನ್ನು ಸಾಧನೆ ಮಾರ್ಗದತ್ತ ಕರೆದೊಯ್ಯುತ್ತದೆ. ಪ್ರತಿ ದಿನವೂ ಶುಭ ದಿನ. ಪ್ರತಿಕ್ಷಣವನ್ನು ವ್ಯರ್ಥ ಮಾಡದೇ ಅಧ್ಯಯನದಲ್ಲಿ ತೊಡಗಿಕೊಂಡಾಗ ನೀಟ್ ಮತ್ತು ಜೆ.ಇ.ಇ. ಅಂತಹ ರಾಷ್ಟ್ರಮಟ್ಟದ ಪರೀಕ್ಷೆ ಎದುರಿಸಲು ಸಾಧ್ಯ ಎಂದು ಪ್ರಾಚಾರ್ಯರಾದ ಪ್ರೊ. ಬಿ. ಕೆ. ಕೊಣ್ಣೂರ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ 2023–24 ನೇ ಸಾಲಿನ ನೀಟ್ ಹಾಗೂ ಜೆ.ಇ.ಇ ಸಾಧಕರನ್ನು ಮತ್ತು ಪಿ.ಯು. ಬೋರ್ಡ ಪರೀಕ್ಷೆಯಲ್ಲಿ ರಾಜ್ಯಕ್ಕೆ ಎಂಟನೇ ರ್ಯಾಂಕನಲ್ಲಿ ತೇಗ9ಡೆಯಾದ ಸಾಧಕನನ್ನು ಸತ್ಕರಿಸಲಾಯಿತು. ವಿದ್ಯಾರ್ಥಿಗಳಿಂದ ಅನಿಸಿಕೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನೆರವೇರಿದವು.

ಸಮಾರಂಭದಲ್ಲಿ ಪ್ರಾಚಾರ್ಯರಾದ ಪ್ರೊ. ಬಿ. ಕೆ. ಕೊಣ್ಣೂರ, ಡಾ. ಪೂರ್ಣಿಮಾ ಜಿ, ಉಪಾಧ್ಯಕ್ಷರಾದ ನಿಖಿಲ ಕೊಣ್ಣೂರ, ಆಡಳಿತಾಧಿಕಾರಿಗಳಾದ ಶೀತಲ್ ಕೊಣ್ಣೂರ, ಉಪಪ್ರಾಚಾರ್ಯರಾದ ಶಿವಾನಂದ ಕಂದಗಲ್ ಮತ್ತು ಮಹಾವಿದ್ಯಾಲಯದ ಉಪನ್ಯಾಸಕ ವರ್ಗದವರು ಉಪಸ್ಥಿತರಿದ್ದರು.

# ಗ್ರಂಥಾಲಯಗಳು ದೇವಾಲಯಗಳು ಇದ್ದಂತೆ: ಗ್ರಂಥ ಗುರು ಅಭಿನಂದನಾ ಕೃತಿ ಲೋಕಾರ್ಪಣೆ



**ರಬಕವಿ–ಬನಹಟ್ಟಿ :** ಗ್ರಂಥಾಲಯಗಳು ದೇವಾಲಯಗಳು ಇದ್ದಂತೆ ಮತ್ತು ಅಲ್ಲಿರುವ ಗ್ರಂಥಪಾಲಕರು ದೇವತೆಗಳ ಸಮಾನ ಎಂದು ಧಾರವಾಡದ ಕನ್ನಡ ಉಪನ್ಯಾಸಕ ಜಿನದತ್ತ ಹಡಗಲಿ ತಿಳಿಸಿದರು.

ಮಂಗಳವಾರ ಇಲ್ಲಿನ ಭದ್ರನವರ ಕಲ್ಯಾಣಮಂಟಪದಲ್ಲಿನಿವೃತ್ತಗ್ರಂಥ ಪಾಲಕ ಪ್ರೊ. ವೈ. ಬಿ. ಕೊರಡೂರ ಅವರ ಗ್ರಂಥ ಗುರು ಅಭಿನಂದನಾ ಕೃತಿಯನ್ನುಲೋಕಾರ್ಪಣೆಮಾಡಿ ಮಾತನಾಡಿದರು.

ನಶಿಸಿ ಹೋಗುವ ಸೌಂದರ್ಯ, ನಾನು ಮತ್ತು ನನ್ನದು ಎನ್ನುವುದು ಯಾವುದೂ ಇಲ್ಲದೆ ಇರುವ ಸಂದರ್ಭದಲ್ಲಿ ಜನರ ಹೃದಯದ ಪ್ರೀತಿ, ವಿಶ್ವಾಸವನ್ನು ಗಳಿಸುವುದೆ ನಿಜವಾದ ಸಂಪತ್ತು. ಹೃದಯದಲ್ಲಿ ಒಳ್ಳೆಯ ಚಿಂತನೆಗಳನ್ನು ಇಟ್ಟುಕೊಂಡು ಪರೋಪಕಾರ ಮಾಡುವ ಜೀವನ ನಮ್ಮದಾಗಬೇಕು. ಭಾವನೆ ಶುದ್ಧವಾಗಿದ್ದರೆ ಭಾಗ್ಯಗಳು ನಮ್ಮದಾಗುತ್ತವೆ ಎಂದು ಜಿನದತ್ತ ಹಡಗಲಿ ತಿಳಿಸಿದರು.

ಘೋಡಗೇರಿಯ ಶಿವಾನಂದ ಮಠದ ಮಲ್ಲಯ್ಯ ಸ್ವಾಮೀಜಿ ಮಾತನಾಡಿ, ಸಾಧನೆ ಕಠೋ ರ ತಪಸ್ಸಿನಿಂದ ಮಾತ್ರ ಸಾಧ್ಯವಾಗುತ್ತದೆ. ವ್ಯಕ್ತಿಯ ಮನ, ಮನೆ ಎರಡೂ ಶ್ರೀಮಂತವಾಗಿರಬೇಕು ಎಂದು ತಿಳಿಸಿದರು.

ಬನಹಟ್ಟಿಯ ಹಿರೇಮಠದ ಶರಣಬಸವ ಶಿವಾಚಾರ್ಯರು ಮಾತನಾಡಿ, ಗ್ರಂಥಪಾಲಕರ ವೃತ್ತಿ ಬಹಳಷ್ಟು ಶ್ರೇಷ್ಠವಾದುದು. ಗ್ರಂಥಾಲಯಗಳು ಮನುಷ್ಯರ ಬದುಕನ್ನು ಉತ್ತಮ ವಾಗಿ ರೂಪಿಸುತ್ತವೆಗ್ರಂಥಾಲಯಗಳಿಂದ ಸಮಾಜ ಅಭಿವೃದ್ಧಿಯಾಗುತ್ತದೆ ಎಂದು ನುಡಿದರು.

ಜನತಾ ಶಿಕ್ಷಣ ಸಂಘದ ಕಾರ್ಯಾಧ್ಯಕ್ಷ ಬಸವಂತ ಜಾಡಗೌಡ, ನಿವೃತ್ತ ಗ್ರಂಥಪಾಲಕರಾದ ಬಾಲಶೇಖರ ಬಂದಿ, ಬಿ. ಎಸ್. ಮಾಳವಾಡ, ಧಾರವಾಡದ ನಿವೃತ್ತ ಪ್ರಾಚಾರ್ಯ ಬಿ. ಜಿ. ಬಿರಾದಾರ, ಕೆ.ಪಿ.ಎಸ್. ಸಿ. ಸದಸ್ಯ ಮಲ್ಲಿಕಾರ್ಜುನ ಪಾಟೀಲ, ಈಶ್ವರ ಬುಳಗನ್ನವರ, ಜಯವಂತ ಕಾಡದೇವರ, ಜಿ. ಎಸ್. ವಡಗಾವಿ, ಪ್ರೊ. ಮಲ್ಲಿಕಾರ್ಜುನ ಹುಲಗಬಾಳಿ, ಪ್ರೊ. ಎಂ. ಎಸ್. ಬದಾಮಿ, ಎಸ್. ಬಿ. ಮಾಟೊಳ್ಳಿ , ಶಂಕರ ಸೋರಗಾಂವಿ, ಸುರೇಶ ಕೋಲಾರ,ಪ್ರಾಚಾರ್ಯ ಜಿ.ಆರ್. ಜುನ್ನಾಯ್ಕರ್ ಮುಂತಾದವರು ಉಪಸ್ಥಿತರಿದ್ದರು.

# ಮೂಡನಂಬಿಕೆ–ಕಂದಾಚಾರಗಳನ್ನು ನಂಬಬೇಡಿ: ಕೌಜಲಗಿ



**ಮಹಾಲಿಂಗಪುರ :** ಸಮೀಪದ ರನ್ನಬೆಳಗಲಿಯ ಸಿದ್ಧಾರೂಢ ಪ್ರೌಢಶಾಲೆಯಲ್ಲಿ ಸಮೀರವಾಡಿಯ ನಿವೃತ್ತ ದೈಹಿಕ ಶಿಕ್ಷಣ ಶಿಕ್ಷಕ ಬಿ.ಬಿ.ಕೌಜಲಗಿ ಅವರು ಪವಾಡ ರಹಸ್ಯ ಬಯಲು ಕಾರ್ಯಕ್ರಮ ನಡೆಸಿದರು. ನಾವು ಒಳ್ಳೆಯ ಕಾರ್ಯಕ್ಕೆ ಹೋಗುವಾಗ ಬೆಕ್ಕು, ನಾಯಿ, ಖಾಲಿ ನೀರಿನ ಬಿಂದಿಗೆ ಎದುರಿಗೆ ಅಥವಾ ಅಡ್ಡ ಬಂದರೆ ಅಪಶಕುನವೆಂದು ತಿಳಿದುಕೊಳ್ಳಬೇಡಿ. ಮನೆಯ ಮುಂದೆ ನಾಯಿ, ಕಾಗೆ ಇವೆಲ್ಲ ಬೊಗಳಿದರೆ ಆಪತ್ತು ಕಾದಿದೆ ಎಂದರ್ಥವಲ್ಲ. ಮೂಡನಂಬಿಕೆ ಮತ್ತು ಕಂದಾಚಾರಗಳನ್ನು ಯಾವುದೇ ಕಾರಣಕ್ಕೂ ನಂಬಬೇಡಿ ಎಂದು ಕೌಜಲಗಿ ಹೇಳಿದರು. ನಿಂಬೆಹಣ್ಣು ಮಾಯ,ಗೊಂಬೆಯಲ್ಲಿ ಸೂಜಿ ಚುಚ್ಚುವುದು, ಟೆಂಗಿನಕಾಯಿಯಲ್ಲಿ ಹೂಗಳನ್ನು ಹಾಗೂ ನಿಂಬೆಹಣ್ಣಿನಲ್ಲಿರಕ್ತಕಾಣುವಂತೆಮಾಡುವುದು ಸೇರಿದಂತೆ ಹಲವು ಪವಾಡಗಳನ್ನು ಬಯಲು ಮಾಡಿ ಪ್ರಾಯೋಗಿಕವಾಗಿ ವಿವರಿಸಿದರು.

ಮುಖ್ಯಶಿಕ್ಷಕ ರವೀಂದ್ರ ಕಂಬಾರಅಧ್ಯಕ್ಷತೆ ವಹಿಸಿದ್ದರು. ಎಸ್.ಎಸ್.ಉದಪುಡಿ, ಎಂ.ಆರ್.ಕುಲಕರ್ಣಿ, ಬಿ.ಪಿ.ಚೋಪಡೆ, ಪಿ.ಕೆ.ಪವಾರ, ಎಂ.ಎಸ್.ಕಲ್ಯಾಣಿ, ಎಂ.ವಿ.ಹೊಸೂರ, ಎಂ.ಎಸ್.ಮೇಗಾಡಿ, ಶ್ರೀಶೈಲ ಕಾಡದೇವರ, ಅಮಿತ ತಳಗೇರಿ, ಶೇಖರ ಬಾಗೇವಾಡಿ, ರೇಣುಕಾ ಗಾಣಿಗೇರ ಸೇರಿದಂತೆಹಲವರುಇದ್ದರು.

# ಅಪರ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ

**ಬಾಗಲಕೋಟೆ :** ಜಿಲ್ಲೆಯ ಬಾದಾಮಿ ತಾಲೂಕಿನ ಹಿರಿಯ ಶ್ರೇಣಿ ನ್ಯಾಯಾಲಯದ ಅಪರ ಸರ್ಕಾರಿ ವಕೀಲರ ಹುದ್ದೆಗೆ ಒಂದು ವರ್ಷ ಅವಧಿಯವರೆಗೆ ನೇಮಕಾತಿಗಾಗಿ 7 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿದ ಅರ್ಹ ವಕೀಲರುಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಜುಲೈ 20 ರೊಳಗಾಗಿ ಜಿಲ್ಲಾಧಿಕಾರಿಗಳು ಬಾಗಲಕೋಟೆ ಕಾರ್ಯಾಲಯಕ್ಕೆ ಕಚೇರಿ ಸಮಯದಲ್ಲಿ ನ್ಯಾಯವಾದಿಗಳ ಹೆಸರು ಮತ್ತು ವಿಳಾಸಮ ಮೊಬೈಲ್ ನಂಬರ, ದೃಡೀಕೃತ ಪದವಿ ಪ್ರಮಾಣಪತ್ರಗಳು, ರಾಜ್ಯ ಬಾರ್ ಕೌನ್ಸಿಲ್‌ನಲ್ಲಿ ನೊಂದಾಯಿಸಿದ ಬಗ್ಗೆ ದೃಢೀಕರಣ ಪ್ರತಿ, ಸ್ಥಳೀಯ ವಕೀಲರ ಸಂಘದಲ್ಲಿ ನೊಂದಾಯಿಸಿದ ಬಗ್ಗೆ ದೃಢೀಕರಣ ಪ್ರತಿ, 7 ವರ್ಷ ವಕೀಲವೃತ್ತಿ ಪೂರೈಸಿದ ಬಗ್ಗೆ ಪ್ರಮಾಣ ಪತ್ರದೊಂದಿಗೆ ಅರ್ಜಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

# ಮೈದುಂಬಿಕೊಂಡ ಕೃಷ್ಣಾ ನದಿ: ಹಿಪ್ಪರಗಿ ಜಲಾಶಯದ ಎಲ್ಲ 22 ಗೇಟ್‌ಗಳ ಮೂಲಕ ನೀರು ಹೊರಕ್ಕೆ



**ರಬಕವಿ–ಬನಹಟ್ಟಿ :** ಉತ್ತರ ಕರ್ನಾಟಕದ ಜೀವ ನದಿ ಕೃಷ್ಣೆಯು ಇದೀಗ ಮೈದುಂಬಿಗೊಂಡಿದೆ. ಮಹಾರಾಷ್ಟ್ರದ ಕೋಯ್ನಾ ಜಲಾಶಯದಲ್ಲಿ ಅಪಾರ ಪ್ರಮಾಣದ ನೀರು ಸಂಗ್ರಹಣೆಯಾಗಿರುವ ಕಾರಣ ರಾಜ್ಯಕ್ಕೆ ರಾಜಾಪುರ ಹಾಗು ದೂಧಗಂಗಾ ಜಲಾಶಯದಿಂದ ಸಾಕಷ್ಟು ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ.

ಒಟ್ಟು ಆರು ಟಿಎಂಸಿ ಸಾಮರ್ಥ್ಯ ಹೊಂದಿರುವ ಹಿಪ್ಪರಗಿ ಜಲಾಶಯದಲ್ಲಿ 3.37 ಟಿಎಂಸಿ ಯಷ್ಟು ನೀರು ಸಂಗ್ರಹವಾಗಿದೆ.

ಬಂದಷ್ಟು ನೀರು ಹೊರಕ್ಕೆ: ಶನಿವಾರದಂದು ಹಿಪ್ಪರಗಿ ಜಲಾಶಯದಲ್ಲಿ ರಾಜಾಪುರ ಜಲಾಶಯದಿಂದ 34.4 ಕ್ಯುಸೆಕ್ ಹಾಗು ದೂಧಗಂಗಾ ನದಿಯಿಂದ 10.2 ಕ್ಯುಸೆಕ್ ನೀರು ಹೀಗೆ ಒಟ್ಟಾರೆ ಕಲ್ಲೋಳ ಜಲಾಶಯದಿಂದ 44.6 ಕ್ಯುಸೆಕ್ನಷ್ಟು ನೀರು ಹಿಪ್ಪರಗಿ ಜಲಾಶಯಕ್ಕೆ ಹರಿದು ಬರುತ್ತಿದೆ. ಸದ್ಯ ಇನ್ನಷ್ಟು ನೀರು ಮಹಾರಾಷ್ಟ್ರದಿಂದ ಹರಿ ಬಿಡಲಾಗುತ್ತಿರುವುದರಿಂದ ನೀರಿನ ಪ್ರಮಾಣ ದಿನದಿಂದ ದಿನಕ್ಕೆ ಏರಿಕೆ ಕಾಣುತ್ತಿರುವದು ಸಂತಸ ತರುವಂತಾಗಿದೆ.

## ಚರಂಡಿ ನೀರು ರಸ್ತೆಯಲ್ಲಿ ಗ್ರಾಮಸ್ಥರ ಅಂಗಳದಲ್ಲಿ ಆಕ್ರೋಶ



**ಜಮಖಂಡಿ :** ತಾಲೂಕಿನ ಹುನ್ನೂರಿನ ವಾರ್ಡ ನಂ2 ಹನುಮಾನ ಗಲ್ಲಿಯಲ್ಲಿ ಮುಖ್ಯದ್ವಾರ ಬಾಗಿಲಿನ ಒಳಚರಂಡಿ ಬ್ಲಾಕ್ ಆಗಿದ್ದು, ಚರಂಡಿ ಕೊಳಚೆ ನೀರು ರಸ್ತೆ ಮೇಲೆ ಹರಿಯುವ ಮೂಲಕ ರೋಗಗಳಿಗೆ ಆಹ್ವಾನಿಸುತ್ತಿದೆ. ಮನೆ ಅಂಗಳದಲ್ಲಿ ಚರಂಡಿ ನೀರು ನುಗ್ಗುತ್ತಿದ್ದು ಸಾರ್ವಜನಿಕರ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗಿದೆ.

ಕಳೆದ ಒಂದು ತಿಂಗಳಿಂದ ಮಹಾದ್ವಾರದ ಬಳಿ ಒಳಚರಂಡಿ ಬ್ಲಾಕ್ ಆಗಿದ್ದು ಚರಂಡಿ ನೀರು ರಸ್ತೆ ಮೇಲೆ ಹರಿಯುತ್ತಿದ್ದು, ಸ್ವಚ್ಚತೆಗಾಗಿ ಗ್ರಾಮ ಪಂಚಾಯತಿಗೆ ಅನೇಕ ಮನವಿ ಸಲ್ಲಿಸಲಾಗಿದೆ. ಸಮಸ್ಯೆಗೆ ಸ್ಪಂದಿಸದ ಅಧ್ಯಕ್ಷ ಹಾಗೂ ಅಧಿಕಾರಿಗಳ ನಿರ್ಲಕ್ಷಕ್ಕೆ ಜನರು ರೋಸಿ ಹೋಗಿದ್ದಾರೆ. ಚರಂಡಿ ನೀರು ಗಬ್ಬು ನಾರುತ್ತಿದ್ದು ಹಿರಿಯ ನಾಗರಿಕರು, ತಾಯಂದಿರು, ಮಕ್ಕಳು ಸಂಚಾರಕ್ಕೆ ಪರದಾಡುವಂತಾಗಿದೆ. ಕೂಡಲೆ ಸಮಸ್ಯೆಗೆ ಸ್ಪಂದಿಸದಿದ್ದಲ್ಲಿ ಉಗ್ರ ಹೋರಾಟ ಮಾಡಬೇಕಾಗುತ್ತದೆ ಆಕ್ರೋಶ ವ್ಯಕ್ತಪಡಿಸಿದರು.

# ಹಳೇ ಸರ್ಕಾರಿ ಆಸ್ಪತ್ರೆ ಕಟ್ಟಡದ ಸ್ಥಳ ತನಿಖೆಗೆ ಸೂಚನೆ




**ಮಹಾಲಿಂಗಪುರ :** ಪಟ್ಟಣದ ಗಾಂಧಿ ವೃತ್ತದ ಬಳಿ ಇರುವ ಹಳೆಯ ಸರ್ಕಾರಿ ಆಸ್ಪತ್ರೆ ಕಟ್ಟಡವು ಜಿಲ್ಲಾ ಪಂಚಾಯ್ತಿ ಅಧೀನದಲ್ಲಿದ್ದು, ಅದನ್ನು ಪುರಸಭೆಗೆ ಹಸ್ತಾಂತರಿಸಲು ಸ್ಥಳದ ತನಿಖೆ ಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ಜಿಲ್ಲಾ ಪಂಚಾಯ್ತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಸೂಚಿಸಿದ್ದಾರೆ.

ಈ ಕಟ್ಟಡವನ್ನು ಪುರಸಭೆಗೆ ಹಸ್ತಾಂತರಿಸಿಕೊಂಡು ಅಲ್ಲಿ ಎರಡಂತಸ್ತಿನ ನೂತನ ಕಟ್ಟಡ ನಿರ್ಮಿಸಿ ಮೊದಲ ಮತ್ತು ಕೆಳಗಿನ ಮಹಡಿಯಲ್ಲಿ ಕಾಂಪ್ಲೆಕ್ಸ್ ಹಾಗೂ ತುರ್ತು ಆರೋಗ್ಯ ಚಿಕಿತ್ಸಾ ಘಟಕವನ್ನು ಪ್ರಾರಂಭಿಸಬಹುದು. ಹೀಗಾಗಿ, ಈ ಕಟ್ಟಡವನ್ನು ಪುರಸಭೆಗೆ ಹಸ್ತಾಂತರಿಸುವಂತೆ ಸಾಮಾಜಿಕ ಹೋರಾಟಗಾರ ಚನಬಸು ಹುರಕಡ್ಲಿ ನೇತೃತ್ವದಲ್ಲಿ ಪಟ್ಟಣದ ನಾಗರಿಕರು ಹಾಗೂ ವಿವಿಧ ಸಂಘಟನೆಗಳು, ವಿವಿಧ ರಾಜಕೀಯ ಧುರೀಣರು ಮನವಿ ಸಲ್ಲಿಸಿದ್ದರು.ಈ ಹಿನ್ನೆಲೆ ಕ್ರಮಕ್ಕೆ ಮುಂದಾಗಿರುವ ಜಿಲ್ಲಾ ಪಂಚಾಯ್ತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಸ್ಥಳದ ತನಿಖೆಗೆ ಸೂಚಿಸಿದ್ದಾರೆ.

ಏತನ್ಮಧ್ಯೆ ಇದೇ ವಿಷಯಕ್ಕೆ ಸಂಬಂಧಿಸಿದಂತೆ ಜಿಲ್ಲಾ ಪಂಚಾಯ್ತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪತ್ರ ಬರೆದಿರುವ ಪುರಸಭೆ ಮುಖ್ಯಾಧಿಕಾರಿಗಳು, ಸೂಚಿತ ಕಟ್ಟಡದ ಜಾಗೆಯು ಎಕ್ಸಿಕ್ಯೂಟಿವ್‌ಎಂಜಿನಿಯರ್ ಪಿಡಬ್ಲ್ಯೂಡಿ ಬಾಗಲಕೋಟೆ ಡಿವಿಜನ್ ಅವರ ಹೆಸರಿನಲ್ಲಿದ್ದು, ಈಗಾಗಲೇ 2011ರಲ್ಲಿ ನಡೆದ ಸಾಮಾನ್ಯ ಸಭೆಯಲ್ಲಿ ಪುರಸಭೆಗೆ ಜಾಗೆಯನ್ನು ಬಿಟ್ಟುಕೊಡಲು ಠರಾವು ಮಾಡಲಾಗಿದೆ. ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಈ ಜಾಗೆಯನ್ನು ಪುರಸಭೆಗೆ ಹಸ್ತಾಂತರಿಸುವುದು ಸೂಕ್ತ ಎಂದು ತಿಳಿಸಿದ್ದಾರೆ.

# ವಚನ ಸಾಹಿತ್ಯವನ್ನು ನೀಡುವುದರ ಮೂಲಕ ಹಸಿವನ್ನು ನೀಗಿಸಿಕೊಂಡವರು



**ಬನಹಟ್ಟಿ:** ಹನ್ನೆರಡನೆಯ ಶತಮಾನದ ಶರಣರ ವಚನ ಸಾಹಿತ್ಯವನ್ನು ಸಂಗ್ರಹಿಸಿ ರಕ್ಷಣೆ ಮಾಡಿ ಅವುಗಳನ್ನು ನಾಡಿಗೆ ನೀಡುವುದರ ಮೂಲಕ ತಮ್ಮ ಹಸಿವನ್ನು ನೀಗಿಸಿಕೊಂಡವರು ಡಾ. ಹಳಕಟ್ಟಿಯವರು ಎಂದು ಎಸ್ ಟಿ ಸಿ ಕಾಲೇಜಿನ ಕನ್ನಡ ಉಪನ್ಯಾಸಕ ಸುರೇಶ ನಡೋಣಿ ತಿಳಿಸಿದರು.

ಮಂಗಳವಾರ ವಚನ ಸಂರಕ್ಷಣಾ ದಿನಾಚರಣೆಯ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಉಪನ್ಯಾಸಕರಾದ ಮಂಜುನಾಥ ಬೆನ್ನೂರ ಮಾತನಾಡಿ, ಡಾ. ಹಳಕಟ್ಟಿಯವರು ತಾವು ಬಡತನದಲ್ಲಿದ್ದರೂ ಕೂಡಾ ಶ್ರೀಮಂತವಾದ ವಚನ ಸಾಹಿತ್ಯವನ್ನು ನಾಡಿಗೆ ನೀಡಿದ ಶ್ರೇಷ್ಠ ವ್ಯಕ್ತಿ. ವಿಜಯಪುರದ ಬಿ.ಎಲ್.ಡಿ. ಇ. ಶಿಕ್ಷಣ ಸಂಸ್ಥೆಯನ್ನು, ಸಿದ್ದೇಶ್ವರ ಬ್ಯಾಂಕ್, ಸಿದ್ದೇಶ್ವರ ಹೈಸ್ಕೂಲ್ ಮತ್ತು ಬನಹಟ್ಟಿಯ ಜನತಾ ಶಿಕ್ಷಣ ಸಂಘವನ್ನು ಸ್ಥಾಪನೆ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು ಎಂದರು.

ಉಪನ್ಯಾಸಕ ವಿಶ್ವಜ ಕಾಡದೇವರ ಮಾತನಾಡಿ, ಡಾ. ಹಳಕಟ್ಟಿಯವರು ಪತ್ರಕರ್ತರಾಗಿಯೂ ಕೂಡಾ ಸೇವೆ ಸಲ್ಲಿಸಿದ್ದಾರೆ. ಶಿವಾನುಭವ ಮತ್ತು ನವ ಕರ್ನಾಟಕ ಪತ್ರಿಕೆಗಳನ್ನು ನಾಡಿಗೆ ನೀಡಿದ್ದರು.

ಪ್ರಾಚಾರ್ಯ ಜಿ. ಆರ್. ಜುನ್ನಾಯ್ಕರ್, ಪ್ರಕಾಶ ಕೆಂಗನಾಳ, ಗೀತಾ ಸಜ್ಜನ, ವಿ. ವೈ. ಪಾಟೀಲ, ವೆಂಕಟೇಶ ಕುಲಕರ್ಣಿ, ರತ್ನಾ ಪಾಟೀಲ, ಶಿವು ಇಟ್ನಾಳ, ಎನ್. ಎಚ್. ಭಜಂತ್ರಿ, ಜಿ. ಎಸ್. ಪಾಟೀಲ ಸೇರಿದಂತೆ ಅನೇಕರು ಭಾಗವಹಿಸಿದ್ದರು.

# ವೈದ್ಯಕೀಯ ಸೇವೆಯೇ ಅನನ್ಯ: ಡಾ. ಕಾಡಪ್ಪ



**ಮಹಾಲಿಂಗಪುರ :** ವೈದ್ಯ ವೃತ್ತಿ ಪವಿತ್ರವಾದ ವೃತ್ತಿಯಾಗಿದೆ. ವೈದ್ಯರು ಸಮಾಜದ ಸ್ವಾಸ್ಥ್ಯವನ್ನು ಕಾಪಾಡುವ ಜತೆಗೆ ಆರೋಗ್ಯ ರಕ್ಷಣೆ ಮಾಡುತ್ತಾರೆ.ಹೀಗಾಗಿ, ಸಮಾಜಕ್ಕೆ ವೈದ್ಯರ ಸೇವೆ ಅನನ್ಯವಾಗಿದೆ ಎಂದು ಬನಹಟ್ಟಿಯ ಡಾ.ಕಾಡಪ್ಪ ಶೆಡ್ಯಾಳ ಹೇಳಿದರು.

ಸಮೀಪದ ರನ್ನಬೆಳಗಲಿಯ ಢಪಳಾಪುರ ವಿದ್ಯಾವಿಹಾರಸಿಬಿಎಸ್‌ಸಿಶಾಲೆಯಲ್ಲಿಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರೋಗಿಗಳ ಸೇವೆಯಲ್ಲಿ ತಮ್ಮ ಸಂತೋಷವನ್ನು ಕಾಣುವುದು ವೈದ್ಯರಿಗೆ ರಕ್ತಗತವಾಗಬೇಕು. ವೈದ್ಯಕೀಯ ಕ್ಷೇತ್ರದಲ್ಲಿ ಸೇವೆಯ ಜತೆಗೆ ಪ್ರಾಮಾಣಿಕತೆಯು ಮುಖ್ಯವಾಗಿರುತ್ತದೆ ಎಂದರು.

ಪತ್ರಕರ್ತ ಶಿವಲಿಂಗ ಸಿದ್ನಾಳ, ಶಿಕ್ಷಕಿ ರೇಷ್ಮಾ ಮಾತನಾಡಿದರು.ಶಾಲೆಯ ವ್ಯವಸ್ಥಾಪಕ ವಿವೇಕ ಢಪಳಾಪುರ, ಪ್ರಾಚಾರ್ಯ ಲೂಯಿಸ್ ಬರೆಟೋ ಹಾಗೂ ಶಿಕ್ಷಕರು, ಗುರುಮಾತೆಯರು ಇದ್ದರು.

# ಪತ್ರಕರ್ತ ಮತ್ತಿಹಳ್ಳಿ ಮದನಮೋಹನ, ರಾಮೋಜಿರಾವ್‌ರಿಗೆ ಸಂತಾಪ



**ವಿಜಯಪುರ :** ಮತ್ತಿಹಳ್ಳಿ ಮದನಮೋಹನ ಪತ್ರಿಕೋದ್ಯಮದ ಸರ್ವಕಾಲಿಕ ಆದರ್ಶ ಪತ್ರಕರ್ತರಾಗಿದ್ದರು. ಸುಮಾರು 45 ವರ್ಷಗಳ ವೃತ್ತಿ ಬದುಕಿನಲ್ಲಿ ಯಾವುದೇ ಭಿಡೆ ಇಲ್ಲದೆ ಬರೆದವರು. ಅವರು ಪತ್ರಿಕೋದ್ಯಮದ ವಿಶ್ವಕೋಶವೇ ಆಗಿದ್ದರು ಎಂದು ಹಿರಿಯ ಪತ್ರಕರ್ತ ಗೋಪಾಲ ನಾಯಕ ಹೇಳಿದರು.

ಇಲ್ಲಿನ ಪತ್ರಿಕಾಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಇತ್ತೀಚೆಗೆ ಮೃತಪಟ್ಟ ಹಿರಿಯ ಪತ್ರಕರ್ತರಾದ ಮದನ್‌ಮೋಹನ ಹಾಗೂ ರಾಮೋಜಿರಾವ್ ಅವರಿಗೆ ಹಮ್ಮಿಕೊಂಡಿದ್ದ ಸಂತಾಪ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ಮದನಮೋಹನ ನನ್ನ ಗುರುವಾಗಿದ್ದರು. ಸ್ನೇಹಿತರಾಗಿದ್ದರು. ಆತ್ಮಬಂಧುವಾಗಿದ್ದರು. ಅವರನ್ನು ಕಳೆದುಕೊಂಡು ಪತ್ರಿಕೋದ್ಯಮ ಬಡವಾಗಿದೆ ಎಂದರು.

ತಮ್ಮ ಅವರ ಬಾಂಧವ್ಯ ಐದು ದಶಕಗಳದ್ದು. ಆಗ ಮದನಮೋಹನ ಉತ್ತರ ಕರ್ನಾಟಕ, ಗೋವಾ ರಾಜ್ಯ ಸೇರಿದಂತೆ 16 ಜಿಲ?ಲೆಗಳಿಗೆ ದಿ.ಹಿಂದೂ ಪತ್ರಿಕೆಯ ಪ್ರತಿನಿಯಾಗಿದ್ದರು. ಎಲ್ಲಿಯೇ ದೊಡ್ಡ ಕಾರ್ಯಕ್ರಮಗಳಾಗಲಿ, ಅನಾಹುತಗಳಾಗಲಿ, ಸಮಸ್ಯೆಗಳಾಗಲಿ ಅಲ್ಲಿ ಅವರು ಹಾಜರಿದ್ದು ವರದಿ ಮಾಡುತ್ತಿದ್ದರು. ಉತ್ತರ ಕರ್ನಾಟಕದಲ್ಲಿ ಮೊದಲ ಬಾರಿಗೆ ಲ್ಯಾಪ್ಟಾಪ್ ಬಳಸಿದವರು. ಅವರಲ್ಲಿ ದಾಖಲೆಗಳ ಬಹುದೊಡ್ಡ ಸಂಗ್ರಹವೇ ಇರುತ್ತಿತ್ತು. ಪ್ರತಿಯೊಂದು ಸೂಕ್ಷ್ಮ ವಿಷಯಗಳನ್ನು ಅಂಕಿ ಅಂಶಗಳನ್ನು ತಮ್ಮ ಡೈರಿಯಲ್ಲಿ ಬರೆದಿಟ್ಟುಕೊಳ್ಳುತ್ತಿದ್ದರು. ಅದಕ್ಕೆ ಅವರು ಪಂಚಾಂಗ ಎಂದು ತಮಾಷೆಯಾಗಿ ಕರೆ–ಯುತ್ತಿದ್ದರು. ವಿಜಯಪುರಕ್ಕೆ ಬಂದಾಗಲೆಲ್ಲ ನಮ್ಮ ಮನೆಯಲ್ಲಿಯೇ ವಾಸ್ತವ್ಯ ಮಾಡುತ್ತಿದ್ದರು. ಅಂಥ ಸ್ನೇಹಿತನನ್ನು ಕಳೆದುಕೊಂಡು ನನಗೆ ಅನಾಥ ಪ್ರಜ್ಞೆ ಕಾಡುವಂತಾಗಿದೆ ಎಂದರು.

ಹಿರಿಯ ಪತ್ರಕರ್ತ ವಾಸುದೇವ ಹೆರಕಲ್ಲ ಮಾತನಾಡಿ, ಮತ್ತಿಹಳ್ಳಿ ಮದನಮೋಹನ ನಿರ್ಮೋಹಿಯಾಗಿದ್ದರು. ಅವರ ಪತ್ರಿಕೋದ್ಯಮದಲ್ಲಿ ಸಂತನಂತೆ ಬದುಕಿದರು. ಯಾರ ಋಣದಲ್ಲಿ ಇರಲಿಲ್ಲ. ನಿವೃತ್ತಿಯ ನಂತರದಲ್ಲಿ ಹುಬ್ಬಳ್ಳಿಯ ಪಂ. ಕೊರಳಹಳ್ಳಿ ನರಸಿಂಹಾಚಾರ್ಯರ ಶಿಷ್ಯತ್ವ ವಹಿಸಿ ಶ್ರೀಮನ್ನಾಯಸುಧಾ ಅಧ್ಯಯನ ಮಾಡುತ್ತಿದ್ದರು. ವೇದ ವೇದಾಂತದ ಬಗ್ಗೆ ಅಪಾರ ಗೌರವ ಹೊಂದಿದ್ದರು ಎಂದರು.

ಹಿರಿಯ ಪತ್ರಕರ್ತ ಅಶೋಕ ಯಡಹಳ್ಳಿ ಮಾತನಾಡಿ, ಕೆಲವೇ ದಿನಗಳ ಅಂತರದಲ್ಲಿ ಮದನಮೋಹನ ಹಾಗೂ ರಾಮೋಜಿರಾವ್ ಅವರನ್ನು ಕಳೆದುಕೊಂಡು ಮಾಧ್ಯಮ ಲೋಕ ಶೂನ್ಯ ಸ್ಥಿತಿಯನ್ನು ಅನುಸರಿಸುವಂತಾಗಿದೆ. ಪತ್ರಿಕೋದ್ಯಮದಲ್ಲಿ ಮದನಮೋಹನ ಅವರ ಹೆಸರು ಚಿರಸ್ಥಾಯಿ. ಅವರ ಆದರ್ಶಗಳನ್ನು ಪಾಲಿಸುವುದೇ ಅವರಿಗೆ ಸಲ್ಲಿಸುವ ಗೌರವ ಎಂದರು.

ಅದೇ ರೀತಿ ರಾಮೋಜಿರಾವ್ ದೃಶ್ಯಮಾಧ್ಯಮದ ಮೇರು ಪರ್ವತ. ಅವರ ಸಂಸ್ಥೆ ಪತ್ರಿಕೋದ್ಯಮಿಗಳ ಪಾಠಶಾಲೆಯಂತಿತ್ತು ಎಂದರು.

ಕಾರ್ಯನಿರತ ಪತ್ರಕರ್ತರ ಸಂಘದ ಜಿಲ?ಲಾಧ್ಯಕ್ಷ ಸಂಗಮೇಶ ಚೂರಿ ಅಧ್ಯಕ್ಷತೆ ವಹಿಸಿ, ತಾವು ಹುಬ್ಬಳ್ಳಿಯಲ್ಲಿ ಕೆಲಸ ಮಾಡುತ್ತಿದ್ದ ಸಂದರ್ಭದಲ್ಲಿ ಮದನಮೋಹನ ಅವರ ಸಂಪರ್ಕ ದೊರಕಿತ್ತು. ನಾಲ್ಕಾರು ಬಾರಿ ಅವರನ್ನು ಭೇಟಿಯಾಗುವ ಸೌಭಾಗ್ಯವೂ ನನ್ನದಾಗಿತ್ತು. ಅವರ ಭಾಷಣಗಳಿದ್ದಲ್ಲಿಗೆ ನಾನು ಹುಡುಕಿಕೊಂಡು ಹೋಗುತ್ತಿದ?ದೆ. ಕಿರಿಯ ಪತ್ರಕರ್ತರನ್ನು ಸ್ನೇಹಿತರಂತೆ ಕಾಣುವ ದೊಡ್ಡ ಗುಣ ಅವರಲ್ಲಿತ್ತು ಎಂದು ಸ್ಮರಿಸಿದರು. ಜೊತೆಗೆ ರಾಮೋಜಿರಾವ್ ಕರ್ನಾಟಕದ ಅದೆಷ್ಟೋ ಪತ್ರಕರ್ತರ ಕುಟುಂಬಕ್ಕೆ ಅನ್ನದಾತರಾಗಿದ್ದನ್ನು ಮೆಲುಕು ಹಾಕಿದರು.

ಕಾನಿಪ ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ, ಖಜಾಂಚಿ ರಾಹುಲ್ ಆಪ್ಟೆ, ಶರಣು ಮರನೂರ, ಎಸ್.ಬಿ.ಪಾಟೀಲ ಮತ್ತಿತರರಿದ್ದರು.

"SIHI KAHI" Kannada Daily Morning, Editor, Owner, Publisher, Printer by MARUTI BASAVANTAPPA HOASAMANI Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at SUDIN PRINTERS, Sector No. 33, Shop No. 38 & 40, Opp. Ambedkar Bhavan, NAVANAGAR, BAGALKOT-587 101. Dist : Bagalkot, Karnataka State